MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 05 | ಸಂಚಿಕೆ: 30 | ಶನಿವಾರ : 15-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 30 | SATURDAY : 15-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ತುಂಗಭದ್ರಾ ಜಲಾಶಯದ ನೀರು ವಿವಿಧ ಕಾಲುವೆಗಳಿಗೆ ಒದಗಿಸಲು ಕಾಲಾವಧಿ ನಿಗದಿ

ಯುವ ಮಾರ್ಗ ಸುದ್ದಿ



**ರಾಯಚೂರು,ನ.14**–2025–26ನೇ ಸಾಲಿನ ತುಂಗಭದ್ರಾ ಜಲಾಶಯದ ಹಿಂಗಾರು ಹಂಗಾಮಿಗೆ ಲಭ್ಯವಿರುವ ನೀರನ್ನು ಒದಗಿಸುವ ಕುರಿತು ನಿರ್ಣಯಿಸಲು ತುಂಗಭದ್ರಾ ಯೋಜನೆಯ ಮತ್ತು ವಿಜಯನಗರ ಕಾಲುವೆಗಳ 125ನೇ ನೀರಾವರಿ ಸಲಹಾ ಸಮಿತಿ ಸಭೆಯು ಬೆಂಗಳೂರಿನ ವಿಧಾನಸೌಧದ 3ನೇ ಮಹಡಿಯ ಸಮಿತಿ ಕೊಠಡಿ ಸಂಖ್ಯೆ:313ರಲ್ಲಿ ನಡೆಸಲಾಯಿತು.

ಉಪ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರಾದ ಶಿವರಾಜ ಎಸ್. ತಂಗಡಗಿ, ಸಚಿವರಾದ ಎನ್ ಎಸ್ ಬೋಸರಾಜು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಪ್ರಾದೇಶಿಕ ಆಯುಕ್ತರು, ಜಿಲ್ಲಾಧಿಕಾರಿಗಳು ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳು, ಕೃಷಿ ಅಧಿಕಾರಿಗಳೊಂದಿಗೆ ವಿಸ್ತೃತವಾಗಿ ಚರ್ಚಿಸಿ ನೀರು ಹರಿಸಲು ಕಾಲಾವಧಿ ನಿಗದಿಪಡಿಸಲಾಗಿದೆ.

ತುಂಗಭದ್ರಾ ಜಲಾಶಯದ ಮಟ್ಟ 1613.00 ಅಡಿ ತಲುಪಿದ ನಂತರ ಕ್ರಸ್ಟ ಗೇಟ್‌ಗಳನ್ನು ಅಳವಡಿಸುವ ಕಾರ್ಯವನ್ನು ಕೈಗೊಂಡಿರುವುದರಿಂದ ಹಿಂಗಾರು ಹಂಗಾಮಿಗೆ ನೀರನ್ನು ಒದಗಿಸಲು ಸಾಧ್ಯವಾಗುವುದಿಲ್ಲ. ಮುಂಗಾರು ಹಂಗಾಮಿನಲ್ಲಿ ಬೆಳೆದು ನಿಂತ ಬೆಳೆಗಳಿಗಾಗಿ ಹಾಗೂ ಬೇಸಿಗೆ ಸಮಯದಲ್ಲಿ ಕುಡಿಯುವ ನೀರಿಗಾಗಿ ಕೆರೆಕಟ್ಟೆ ತುಂಬಿಸುವುದು ಹಾಗೂ ಇತರೆ ಉಪಯೋಗಕ್ಕಾಗಿ ನೀರನ್ನು ಕಾಯ್ದಿರಿಸಿ ನೀರು ಹರಿಸಲು ನಿರ್ಣಯಿಸಲಾಗಿದೆ.

ತುಂಗಭದ್ರಾ ಎಂಡದಂಡೆ ಮುಖ್ಯ ಕಾಲುವೆಗೆ ದಿನಾಂಕ 01–12–2025ರಿಂದ 10–01–2026ರವರೆಗೆ 3000 ಕ್ಯೂಸೆಕ್ಸ್‌ನಂತೆ ಬೆಳೆದು ನಿಂತ ಬೆಳೆಗಳಿಗೆ ಮಾತ್ರ ನೀರನ್ನು ಒದಗಿಸಲು ಕಾಲಾವಧಿ ನಿಗದಿ ಮಾಡಲಾಗಿದೆ.

ಎಡದಂಡೆ ವಿಜಯನಗರ ಕಾಲುವೆಗೆ ದಿನಾಂಕ 01–01–2026ರಿಂದ 10–05–2026ರವರೆಗೆ 150 ಕ್ಯೂಸೆಕ್ಸ್‌ನಂತೆ ವಿತರಣಾ ಕಾಲುವೆ 1ರಿಂದ 11 ರವರೆಗೆ ನೀರನ್ನು ಒದಗಿಸಲು ಕಾಲಾವಧಿ ನಿಗದಿ ಮಾಡಲಾಗಿದೆ.

ತುಂಗಭದ್ರಾ ಬಲದಂಡೆ ಮೇಲ್ಮಟ್ಟದ **(2ನೇಪುಟಕ್ಕೆ..)**

## ಜಿಲ್ಲಾಡಳಿತದ ವಿರುದ್ಧ ದೇವದುರ್ಗದ ಶಾಸಕಿ ಕರೆಮ್ಮ ನಾಯಕ ತೀವ್ರ ಆಕ್ರೋಶ



ಯುವ ಮಾರ್ಗ ಸುದ್ದಿ

**ದೇವದುರ್ಗ,ನ.14**– ತಾಲೂಕು ನ್ಯಾಯಾಲಯ ಕಟ್ಟಡ ಉದ್ಘಾಟನೆ ಕಾರ್ಯಕ್ರಮಕ್ಕೆ ದೇವದುರ್ಗ ಕ್ಷೇತ್ರ ಶಾಸಕರ ಹೆಸರನ್ನು ಉದ್ದೇಶ ಪೂರ್ವಕವಾಗಿ ಹೆಸರು ಕೈಬಿಡುವ ಮೂಲಕ ಶಿಷ್ಟಾಚಾರ ಉಲ್ಲಘನೆ ಮಾಡಲಾಗಿದೆ. ಇದು ಜಿಲ್ಲಾಡಳಿತ ನನಗೆ ಮಾಡಿದ ಅಪಮಾನವಲ್ಲ ದೇವದುರ್ಗ ಕ್ಷೇತ್ರದ ಮತದಾರರಿಗೆ ಮಾಡಿದ ಅವಮಾನವಾಗಿದೆ ಎಂದುಶಾಸಕಿ ಕರೆಮ್ಮ ಜಿ.ನಾಯಕ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಶಾಸಕ ಕಚೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿ ಉದ್ದೇಶಿಸಿ ಶುಕ್ರವಾರ ಮಾತನಾಡಿದರು. ನ.15ರಂದು ತಾಲೂಕು ನ್ಯಾಯಾಲಯ ಕಟ್ಟಡ ಉದ್ಘಾಟನೆ ಕಾರ್ಯಕ್ರಮ ನಡೆಯಲಿದೆ. ಸರ್ಕಾರ ಹಾಗೂ ಜಿಲ್ಲಾಡಳಿತ ನನ್ನನ್ನು ಟಾರ್ಗೆಟ್ ಮಾಡಿ ನನ್ನನ್ನು ಕಾರ್ಯಕ್ರಮದಿಂದ ಹೊರಗಿಟ್ಟಿದೆ. ಇದು ನನಗೆ ತುಂಬ ನೋವಾಗಿದೆ. ಆದರೂ ತಾಲೂಕಿನ ಜೆಡಿಎಸ್ ಕಾರ್ಯಕರ್ತರು, ಅಭಿಮಾನಿಗಳು ಯಾವುದೇ ಗಲಾಟೆ, ಗದ್ದಲ ಮಾಡದೆ ಕಾರ್ಯಕ್ರಮ ಶಾಂತಿಯುವಾಗಿ ನಡೆಸಿಕೊಡಲು ಮುಂದಾಗಬೇಕು ಎಂದು ಮನವಿ ಮಾಡಿದರು.

ಇದು ಸಂಪೂರ್ಣ ಜಿಲ್ಲಾಡಳಿತ ಹಾಗೂ ಸರ್ಕಾರದ ಕಾರ್ಯಕ್ರಮವಾಗಿದ್ದು ಇಲ್ಲಿ ನ್ಯಾಯಾಂಗದ ಪಾತ್ರವಲ್ಲ, ಜಿಲ್ಲಾಧಿಕಾರಿ ಮೂಲಕ ನನ್ನನ್ನು ಸರ್ಕಾರ ಟಾರ್ಗೆಟ್ ಮಾಡಲು ಮುಂದಾಗಿದೆ. ಶಿಷ್ಟಾಚಾರದ ಪ್ರಕಾರ ಶಾಸಕರು ಕಾರ್ಯಕ್ರಮದ ಮುಖ್ಯ ಅತಿಥಿಯಾಗಿರಬೇಕು. ಆದರೆ ನನ್ನನ್ನು ಟಾರ್ಗೆಟ್ ಮಾಡಿದ ಜಿಲ್ಲಾಡಳಿತ ಹಾಗೂ ಸರ್ಕಾರ ಆಹ್ವಾನ ಪತ್ರಿಕೆಯಲ್ಲಿ ಹಾಗೂ ಶಿಲಾನ್ಯಾಸ ಪಟ್ಟಿಯಲ್ಲಿ ನನ್ನ ಹೆಸರು । ಕೈಬಿಡುವ ಮೂಲಕ ಜನಪ್ರತಿನಿಧಿಗಳ ಹಕ್ಕು ಚ್ಯುತಿಯಾಗಿದೆ. ಇದು ನನಗೆ ಮಾಡಿದ **(2ನೇಪುಟಕ್ಕೆ..)**

## ಕಾಲೇಜು ವಿದ್ಯಾರ್ಥಿಗಳಿಗೆ ಕಾನೂನು ಜ್ಞಾನ ಅತ್ಯಗತ್ಯ ನ್ಯಾ. ಶಶಿಧರ ಶೆಟ್ಟಿ ಸಲಹೆ

ಯುವ ಮಾರ್ಗ ಸುದ್ದಿ



**ರಾಯಚೂರು,ನ.14**– ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ಓದುವ ವಿದ್ಯಾರ್ಥಿಗಳಿಗೆ ಕಾನೂನು ಜ್ಞಾನ ಇರಲೇಬೇಕು. ಕಾನೂನು ಸೇವಾ ಪ್ರಾಧಿಕಾರದ ಬಗ್ಗೆ ಮಾಹಿತಿ ಇರಬೇಕು. ವಿದ್ಯಾರ್ಥಿಗಳ ಕ್ಲಬ್ ರಚಿಸಿ ಅಥವಾ ಎನ್‌ಎಸ್‌ಎಸ್ ಕ್ಯಾಂಪ್‌ಗಳ ಮುಖಾಂತರ ಹಳ್ಳಿಗಳಿಗೆ ಹೋಗಿ ಕಾನೂನು ಅರಿವು ಮೂಡಿಸುವ ಕಾರ್ಯ ಕಾಲೇಜುಗಳು ಮತ್ತು ವಿವಿಗಳಲ್ಲಿ ಆಗಬೇಕು ಎಂದು ಗೌರವಾನ್ವಿತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶಶಿಧರ ಶೆಟ್ಟಿ ಅವರು ಹೇಳಿ ದರು.

ಶುಕ್ರವಾರ ದಂದು ತಾಲೂಕಿನ ಯರಗೇರಾ ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಸಭಾಂಗಣದಲ್ಲಿ ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಯಚೂರಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ರಾಯಚೂರು ವಿಭಾಗದ ಮಾನವ ಹಕ್ಕುಗಳ ಮತ್ತು ಭ್ರಷ್ಟಚಾರ ವಿರೋಧಿ ಸಂಸ್ಥೆ ದೆಹಲಿ ಮತ್ತು ಹೆಚ್.ಆರ್.ಎ.ಸಿ.ಎಫ್ ಮತ್ತು ವಾಲ್ಮೀಕಿ ವಿಶ್ವವಿದ್ಯಾನಿಲಯದ ಲೀಗಲ್ ಅವೆರ್‌ನೆಸ್ ಕಮೀಟಿ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮೂಲಭೂತ ಹಕ್ಕುಗಳಿಗಿಂತ ಕರ್ತವ್ಯಗಳ ಮಾಹಿತಿಯ ಅರಿವು ಮೂಡಿಸುವುದು ಮುಖ್ಯ. ವಾಹನ ಅಪಘಾತಗಳು, ಲೈಂಗಿಕ ದೌರ್ಜನ್ಯ, ಡ್ರಗ್ಸ್ ಮಾರಾಟ, ವೃದ್ಧರ ಪೋಷಣೆಯ ನಿರ್ಲಕ್ಷ್ಯ, ಕಾನೂನು ನೆರವು, ಲೋಕ್ ಅದಾಲತ್, ಲೈಂಗಿಕ ಅಪರಾಧಗಳಿಂದ ಮಕ್ಕಳನ್ನು ರಕ್ಷಿಸುವ ಪೋಕ್ಸೋ ಕಾಯ್ದೆ ಬಗ್ಗೆ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಸಚಿವರಾದ ಡಾ.ಎ.ಚನ್ನಪ್ಪ ಅವರು ಮಾತನಾಡಿ, ನಮಗೆ ಶಿಕ್ಷಣ ದೊರೆಯುತ್ತಿದೆ. ಆದರೆ ನೈತಿಕತೆ ಕಡಿಮೆಯಾಗುತ್ತಿದೆ. ಈ ದಿನಮಾನಗಳಲ್ಲಿ ಕಣ್ಮರೆಯಾಗುತ್ತಿರುವ ಅವಿಭಕ್ತ ಕುಟುಂಬದಲ್ಲಿ ಉತ್ತಮ ಸಂಸ್ಕಾರ ಮತ್ತು ಸಂಸ್ಕೃತಿಯ ಜೊತೆಗೆ ಮಕ್ಕಳಿಗೆ ಸಾಕಷ್ಟು ವಿಷಯಗಳ **(2ನೇಪುಟಕ್ಕೆ..)**

## ತಹಸೀಲ್ದಾರ್ ಕಚೇರಿಯಲ್ಲಿ ಲೋಕಾಯುಕ್ತ ಅಧಿಕಾರಿಗಳಿಂದ ಪರಿಶೀಲನೆ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.14**–ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ಲೋಕಾಯುಕ್ತ ರಾಯಚೂರು ವತಿಯಿಂದ ಭ್ರಷ್ಟಾಚಾರ ವಿರೋಧಿ ಜಾಗೃತಿ ಅರಿವು ಸಪ್ತಾಹ ಅಂಗವಾಗಿ ಸಾರ್ವಜನಿಕರಿಗೆ ದೊರೆಯುವ ಕಂದಾಯ ಇಲಾಖೆಯ ಸೇವೆಗಳ ಬಗ್ಗೆ ಕಚೇರಿಯ ವಿವಿಧ ವಿಭಾಗಗಳಲ್ಲಿ ಹಾಗೂ ನೆಮ್ಮದಿ ಕೇಂದ್ರದಲ್ಲಿ ಕರ್ನಾಟಕ ಲೋಕಾಯುಕ್ತ ರಾಯಚೂರು ಉಪಾಧೀಕ್ಷಕರಾದ ರವಿ ಪುರುಷೋತ್ತಮ ಪರಿಶೀಲಿಸಿದರು. ಹಾಗೂ ಸಾರ್ವಜನಿಕರ ಸಮಸ್ಯೆಗಳನ್ನು ಅಲಿಸಿದರು. ನಂತರ ಸಾರ್ವಜನಿಕರಿಂದ ಪಡೆದ ಅರ್ಜಿಗಳನ್ನು ಸಕಾಲದಲ್ಲಿ ನಿಗದಿತ ಅವಧಿಯೊಳಗಾಗಿ ಪರಿಹಾರ ಒದಾಗಿಸುವಂತೆ ಕಂದಾಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಕರ್ನಾಟಕ ಲೋಕಾಯುಕ್ತ ರಾಯಚೂರು ಪೊಲೀಸ್ ನೀರಿಕ್ಷಕರಾದ ಕಾಳಪ್ಪ ಬಡಿಗೇರ ,ಅಧಿಕಾರಿ ಭರತ ಇದ್ದರು.

ತಹಸೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಹಾಗೂ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಲೋಕಾಯುಕ್ತ ಅಧಿಕಾರಿಗಳಿಗೆ ಅಗತ್ಯ ಮಾಹಿತಿ ನೀಡಿದರು.


## ತಾಲೂಕಿನ ವಸತಿ ನಿಲಯಗಳನ್ನು ಪರಿಶೀಲಿಸಿದ ಪುರುರಾಜ್ ಸಿಂಗ್ ಸೋಲಂಕಿ



**ಮಾನ್ವಿ,ನ.14** ತಾಲೂಕಿನ ಪೋತ್ನಾಳ್ ಗ್ರಾಮದ ಗ್ರಾಮ ಪಂಚಾಯಿತಿಗೆ ತಾಲೂಕು ಪಂಚಾಯತ್ ಇ.ಓ. ಪುರುರಾಜ್ ಸಿಂಗ್ ಸೋಲಂಕಿ, ಐ.ಎ.ಎಸ್. ರವರು ಭೇಟಿ ನೀಡಿ ಗ್ರಾಮ ಪಂಚಾಯಿತಿಯ ಪ್ರಗತಿಯ ಬಗ್ಗೆ ಪರಿಶೀಲನೆ ನಡೆಸಿದರು ನಂತರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಮಲ ತ್ಯಾಜ್ಯ ವಿಲೇವಾರಿ ಘಟಕ, ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಭೇಟಿ ನೀಡಿ ಅಲ್ಲಿನ ಸ್ವಚ್ಚತ ಸಿಬ್ಬಂದಿಗಳಿಗೆ ಆರೋಗ್ಯ ರಕ್ಷಣೆಗಾಗಿ ನೀಡಲಾಗಿರುವ ಅಗತ್ಯ ಸುರಾಕ್ಷ ಪರಿಕಾರಗಳಾದ ಹ್ಯಾಂಡ್ ಗ್ಲೌಸ್ ಮತ್ತು ಬೂಟುಗಳನ್ನು ಬಳಸುವಂತೆ ಸೂಚನೆ ನೀಡಿದರು ಘನ ತ್ಯಾಜ್ಯ ವಿಲೇವಾರಿ ಘಟಕಕ್ಕೆ ಪ್ರತ್ಯೇಕವಾದ ಪುಸ್ತಕ ನಿರ್ವಹಿಸುವಂತೆ ತಿಳಿಸಿದರು ಹಾಗೂ ಪ್ರತಿ ತಿಂಗಳು ಸಿಬ್ಬಂದಿಗಳಿಗೆ ವೇತನವನ್ನು ನೀಡುವುದಕ್ಕೆ ಕ್ರಮ ಕೈಗೊಳ್ಳುವಂತೆ ಗ್ರಾ.ಪಂ. ಪಿ.ಡಿ.ಓ. ಬಸವರಾಜ ರವರಿಗೆ ಸೂಚಿಸಿದರು. ಗ್ರಾಮದಲ್ಲಿನ ಅರಿವು ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿರುವ ಪುಸ್ತಕಗಳನ್ನು ಸರಿಯಾಗಿ ಕ್ರಮದಲ್ಲಿ ಜೋಡಿಸುವಂತೆ ಹಾಗೂ ಅಲ್ಲಿರುವ ಕಂಪ್ಯೂಟರ್ ಗಳನ್ನು ಸರಿಯಾದ **(2ನೇಪುಟಕ್ಕೆ)**

## ರಾಯಚೂರು ಮಹಾನಗರ ಪಾಲಿಕೆಯಿಂದ ಕಂದಾಯ ಅದಾಲತ್

ಯುವ ಮಾರ್ಗ ಸುದ್ದಿ



**ರಾಯಚೂರು,ನ.14**– ಮಹಾನಗರ ಪಾಲಿಕೆಯಿಂದ ನಗರದ ಕರ್ನಾಟಕ ಸಂಘದ ಆವರಣದಲ್ಲಿ ನವೆಂಬರ್ 14ರಂದು ಕಂದಾಯ ಅದಾಲತ್ ನಡೆಯಿತು.

ನಿಮ್ಮ ಮನೆಯ ಬಾಗಿಲಿಗೆ ಮಹಾನಗರ ಪಾಲಿಕೆ ಯೋಜನೆ ಅಭಿಯಾನದಡಿ ನಡೆದ ಈ ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಆಯುಕ್ತ ಜುಬೀನ್ ಮೊಹಪಾತ್ರ ಅವರು ಮಾತನಾಡಿ, ಸರ್ಕಾರದಿಂದ ಇ–ಖಾತಾ ವ್ಯವಸ್ಥೆ ಜಾರಿ ತರಲಾಗಿದ್ದು, ನಗರದ ನಾಗರಿಕರು ಈ ಸೌಲಭ್ಯ ಪಡೆಕೊಳ್ಳಬೇಕು. ಪ್ರತಿಯೊಂದು ಆಸ್ತಿಗೂ ಇ–ಖಾತಾ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ.

ಸರ್ಕಾರಿ, ಅರೆ ಸರ್ಕಾರಿ ಹಾಗೂ ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಆಸ್ತಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲ ರೀತಿಯ ಆಸ್ತಿಗಳಿಗೂ ಇ–ಖಾತಾ ಕಡ್ಡಾಯ. ಕಟ್ಟಡ ಹಾಗೂ ನಿವೇಶನಗಳ ಮಾಲೀಕರು, ಆಸ್ತಿಗಳಿಗೆ ಸಂಬಂಧಪಟ್ಟಂತೆ ನೊಂದಾಯಿತ ಪತ್ರಗಳು, ಆಸ್ತಿಯ ಛಾಯಾಚಿತ್ರ, ಮಾಲೀಕರ ಭಾವಚಿತ್ರ, ಮಾಲೀಕರ ಗುರುತಿನ ಚೀಟಿ, ಪಾನ್ ಕಾರ್ಡ್, ರೇಷನ ಕಾರ್ಡ್, ವಿದ್ಯುತ್ ಬಿಲ್, ಕಟ್ಟಡ ಪರವಾನಗಿ ಪತ್ರ, ಅನುಮೋದಿತ ನಕ್ಷೆ, ಬಿನಶೆತ್ಕಿ ನಕಲು ಪ್ರತಿ, ಏಕ ನಿವೇಶನ, ಬಹುನಿವೇಶನಗಳ ತಾಂತ್ರಿಕ ಅನುಮೋದನೆ ನಕ್ಷೆ, ಸಿಟಿಎಸ್ ಉತಾರ, ಕಂದಾಯ ಪಾವತಿಸಿದ ರಶೀದಿ ಹಾಗೂ ಇತರೆ ಅವಶ್ಯಕ ದಾಖಲೆಗಳನ್ನು ಹಾಜರುಪಡಿಸಬೇಕು ಎಂದು ಹೇಳಿದರು.

ಈ ವೇಳೆ ಪಾಲಿಕೆಯ ಸದಸ್ಯ ಶಿಶಿಧರ್ ಮಾತನಾಡಿ, ಅಭಿಯಾನದಲ್ಲಿ ಸಾಕಷ್ಟು ಅರ್ಜಿಗಳು ಸ್ವೀಕರಿಸಲಾಗುತ್ತಿದ್ದು, ಎಲ್ಲ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು, ಉಪ ಅಯುಕ್ತರು ಸೇರಿದಂತೆ ಅಧಿಕಾರಿ ಸಿಬ್ಬಂದಿಯು ಅಭಿಯಾನವನ್ನು ಅಚ್ಚುಕಟ್ಟಾಗಿ ಮಾಡಿದ್ದಾರೆ ಎಂದರು.

ಸ್ಲಂ ಸೇರಿದಂತೆ ಬೇರೆ ಬೇರೆ ಕಡೆ ವಾಸವಾದ ಜನತೆಗೆ ಈ ಅಭಿಯಾನದ ಮೂಲಕ ಅನುಕೂಲವಾಗಿದೆ ಎಂದರು.**(2ನೇಪುಟಕ್ಕೆ..)**

## ಮಹಿಳೆಯರ, ಮಕ್ಕಳ ಸಾಗಣೆ ತಡೆ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ



ಯುವ ಮಾರ್ಗ ಸುದ್ದಿ

**ರಾಯಚೂರು,ನ.14**–ಮಹಿಳೆಯರ ಮತ್ತು ಮಕ್ಕಳ ಸಾಗಣೆ ತಡೆಗಟ್ಟುವುದು ಪ್ರತಿಯೊಬ್ಬ ನಾಗರೀಕರ ಜವಾಬ್ದಾರಿಯಾಗಿದೆ ಎಂದು ಗೌರವಾನ್ವಿತ ಹಿರಿಯ ಶ್ರೇಣಿ ದಿವಾನಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಹೆಚ್.ಎ.ಸಾತ್ವಿಕ್ ಅವರು ಹೇಳಿದರು.

ಗುರುವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪ್ರವಾಸೋದ್ಯಮ ಇಲಾಖೆ, ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಸಂಯುಕ್ತಾಶ್ರಯದಲ್ಲಿ ನಡೆದ ಮಹಿಳೆಯರ ಮತ್ತು ಮಕ್ಕಳ ಅನ್ಯೆತಿಕ ಸಾಗಣೆ ತಡೆಗಟ್ಟುವ ಕುರಿತು ಪ್ರವಾಸಿ ಮಿತ್ರರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಹಿಳೆಯರ ಮತ್ತು ಮಕ್ಕಳ ಅನ್ಯೆತಿಕ ಸಾಗಣೆ ಮಾಡುವುದು ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧ. ಮಹಿಳೆಯರಿಗೆ ಮತ್ತು ಮಕ್ಕಳ ಅನ್ಯೆತಿಕ ಸಾಗಾಣಿಕೆ ಮಾಡುವವರಿಗೆ ಕಠಿಣವಾದ ಶಿಕ್ಷೆಯಿದೆ. ಉತ್ತಮ ಸಮಾಜ ನಿರ್ಮಾಣಕ್ಕೆ ಮಹಿಳೆಯರ ಕೊಡುಗೆ ಅಪಾರವಾಗಿದೆ. ಆದ್ದರಿಂದ ಮಹಿಳೆಯರನ್ನು ಗೌರವದಿಂದ ಕಾಣಬೇಕು. ಮಹಿಳೆಯರ ಮೇಲೆ ನಡೆಯುವ ಮಾನಸಿಕ, ದೈಹಿಕ ದೌರ್ಜನ್ಯ, ಕಿರುಕುಳ ಹಾಗೂ ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ತಡೆಯಬೇಕು. ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ತಾಣಗಳಲ್ಲಿ ಯಾವುದಾದರೂ ಅನ್ಯೆತಿಕ ಚಟುವಟಿಕೆ ನಡೆದರೆ ಅಥವಾ ಅನ್ಯೆತಿಕ ಚಟುವಟಿಕೆ ನಡೆಸಲು ಪ್ರಯತ್ನಪಡುವವರ ವಿರುದ್ಧ ಯಾವುದೇ ಭಯವಿಲ್ಲದೆ ಸಾರ್ವಜನಿಕರು ಹಾಗೂ ಪ್ರವಾಸಿ ಮಿತ್ರರು ಕಾನೂನಿನ ಸಹಾಯ ಪಡೆಯಬೇಕು ಎಂದು ಪ್ರವಾಸಿ ಮಿತ್ರರಿಗೆ ಕಿವಿ ಮಾತು ಹೇಳಿದರು.

ಸಾರ್ವಜನಿಕ ಸ್ಥಳಗಳಲ್ಲಿ ಅನ್ಯೆತಿಕ ಚಟುವಟಿಕೆಗಳಿಗೆ ಆಸ್ಪದ ನೀಡಬಾರದು. ಕಾನೂನಿನ ಸೇವೆ ಪಡೆದು ಅದನ್ನು ತಡೆಯಲು ಪ್ರಯತ್ನಿಸಬೇಕು. ಮಹಿಳೆಯರು ಮತ್ತು ಮಕ್ಕಳು ಅವರ ಹಕ್ಕುಗಳನ್ನು ಸಂಪೂರ್ಣವಾಗಿ ಪಡೆಯಬೇಕು. ಮಹಿಳೆಯರಿಗೆ ಭಯ ಮುಕ್ತ ವಾತಾವರಣ ಕಲ್ಪಿಸಬೇಕು. ಮಕ್ಕಳಿಗೆ ಉತ್ತಮವಾದ ಶಿಕ್ಷಣ ನೀಡಬೇಕು. ಆಗ ಮಾತ್ರ ಸದೃಡ ಸಮಾಜ ನಿರ್ಮಿಸಲು ಸಾಧ್ಯ, ಪ್ರವಾಸಿ ಮಿತ್ರರಿಗೆ ಈ ಕಾರ್ಯಕ್ರಮ **(2ನೇಪುಟಕ್ಕೆ..)**

ಯುವ ಮಾರ್ಗ



## ಮೊದಲನೇಯ ಪುಟದಿಂದ

# ತಾಲೂಕಿನ ವಸತಿ ನಿಲಯಗಳನ್ನು ಪರಿಶೀಲಿಸಿದ ಪುರುರಾಜ್ ಸಿಂಗ್ ಸೋಲಂಕಿ

ರೀತಿಯಲ್ಲಿ ಬಳಕೆ ಮಾಡುವಂತೆ ಪಿ.ಡಿ.ಓ. ಬಸವರಾಜ ರವರಿಗೆ ಸೂಚಿಸಿದರು.

ಮಾನ್ವಿ ಪಟ್ಟಣದ ಬಿ.ಸಿ.ಎಂ. ಇಲಾಖೆಯ ಬಾಲಕಿಯರ ಮೇಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲಿಸಿ ವಸತಿ ನಿಲಯದಲ್ಲಿನ ವಿದ್ಯಾರ್ಥಿನಿಯರಿಂದ ವಸತಿ ನಿಲಯದಲ್ಲಿ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಆಹಾರದ ಗುಣಮಟ್ಟ ಹಾಗೂ ಶುಚ್ಚಿ,ರುಚ್ಚಿಯಾದ ಆಹಾರ ನೀಡಲಾಗುತ್ತಿದೆಯ ಎಂದು ಕೇಳಿ ಮಾಹಿತಿ ಪಡೆದರು ವಿದ್ಯಾರ್ಥಿನಿಯರಿಗೆ ವಸತಿ ನಿಲಯದಲ್ಲಿ ನೀಡಲಾಗುತ್ತಿರುವ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದರು. ವಿದ್ಯಾರ್ಥಿನಿಯರ ಹಾಜರಾತಿಯನ್ನು ಪರಿಶೀಲಿಸಿ ವಸತಿ ಮೇಲ್ವಿಚಾರಕರಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ಬಿ.ಸಿ.ಎಂ. ತಾ. ಅಧಿಕಾರಿ ಭಾಗಯ್ಯನಾಯಕ, ತಾ.ಪಂ. ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕರಾದ ಖಾಲಿದ್ ಅಹ್ಮದ್, ತಾ.ಪಂ.ಪಂಚಾಯತ್ ರಾಜ್ ಇಲಾಖೆ ಸಹಾಯಕ ನಿರ್ದೇಶಕರಾದ ದೀಪಾ ಆರಳಿಕಟ್ಟಿ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿ ಸುರೇಶ, ತಾಂತ್ರಿಕ ಸಿಬ್ಬಂದಿಗಳು,ಪಿ.ಡಿ.ಓ. ಬಸವರಾಜ್ ಸೇರಿದಂತೆ ಇತರ ಅಧಿಕಾರಿಗಳು ಇದ್ದರು.

# ತುಂಗಭದ್ರಾ ಜಲಾಶಯದ ನೀರು ವಿವಿಧ ಕಾಲುವೆಗಳಿಗೆ ಒದಗಿಸಲು ಕಾಲಾವಧಿ ನಿಗದಿ

ಕಾಲುವೆಗೆ 01-12-2025ರಿಂದ 10-01-2026 ರವರೆಗೆ 1300 ಕ್ಯೂಸೆಕ್ಸ್‌ನಂತೆ ಬೆಳೆದು ನಿಂತ ಬೆಳೆಗಳಿಗೆ ನೀರು ಒದಗಿಸಲು ಕಾಲಾವಧಿ ನಿಗದಿ ಮಾಡಲಾಗಿದೆ.

ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆಗಳಿಗೆ 01-12-2025ರಿಂದ 10-01-2026 ರವರೆಗೆ 750 ಕ್ಯೂಸೆಕ್ಸ್‌ನಂತೆ ಬೆಳೆದು ನಿಂತ ಬೆಳೆಗಳಿಗೆ ಮಾತ್ರ ನೀರನ್ನು ಒದಗಿಸಲು ಕಾಲಾವಧಿ ನಿಗದಿ ಮಾಡಲಾಗಿದೆ.

ರಾಯ ಬಸವಣ್ಣ ಕಾಲುವೆಗೆ ದಿನಾಂಕ 01-01-2026ರಿಂದ 31-05-2026 ರವರೆಗೆ ಸರಾಸರಿ 250 ಕ್ಯೂಸೆಕ್ಸ್ ನಂತೆ ಅಥವಾ ಈ ಕಾಲುವೆಯಡಿ ನೀರು ಲಭ್ಯತೆಯು ಇರುವವರೆಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ತುಂಗಭದ್ರಾ ಎಡದಂಡೆ ಮೇಲ್ಮಟ್ಟದ ಕಾಲುವೆಗೆ ದಿನಾಂಕ:01.12.2025 ರಿಂದ 25 ಕ್ಯೂಸೆಕ್ಸ್‌ನಂತೆ ಅಥವಾ ಜಲಾಶಯದ ನೀರಿನ ಮಟ್ಟ 1585 ಅಡಿಗಳವರೆಗೆ ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ನದಿ ಪೂರಕ ಪ್ರದೇಶದಲ್ಲಿ ಸುಮಾರು 150 ಕ್ಯೂಸೆಕ್ಸ್‌ನಂತೆ ನದಿ ಪೂರಕ ಕಾರ್ಖಾನೆ ಒಳಗೊಂಡಂತೆ ನೀರು ಒದಗಿಸಲು ಕಾಲಾವಧಿ ನಿಗದಿ ಮಾಡಲಾಗಿದೆ ಎಂದು ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರಾದ ಶಿವರಾಜ ಎಸ್. ತಂಗಡಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಲೇಜು ವಿದ್ಯಾರ್ಥಿಗಳಿಗೆ ಕಾನೂನು ಜ್ಞಾನ ಅತ್ಯಗತ್ಯ ನ್ಯಾ. ಶಶಿಧರ ಶೆಟ್ಟಿ ಸಲಹೆ

ಬಗ್ಗೆ ಅರಿವು ಮೂಡುತ್ತಿತ್ತು. ಇಂದಿನ ಕಾಲಮಾನದಲ್ಲಿ ನೈತಿಕತೆಯ ತಳಹದಿ ಮೇಲೆ ಜೀವಿಸುವ ಸ್ವಯಂ ಪ್ರಭೆ ಮರೆಮಾಚಿ ಯಾವುದೋ ಒಂದು ಮಾಯಾ ಡಿಜಿಟಲ್ ಲೋಕಕ್ಕೆ ತಮ್ಮನ್ನು ತಾವೆ ಅರ್ಪಿಸಿಕೊಂಡು ಗೊತ್ತು ಗೊತ್ತಿಲ್ಲದೆ ಅಪರಾಧಗಳಲ್ಲಿ ತೊಡಗಿಸಿಕೊಂಡು ನೈತಿಕತೆಯಿಂದ ನಮ್ಮ ಯುವ ಜನತೆ ದೂರ ಹೋಗುತ್ತಿರುವುದು ವಿಪರ್ಯಾಸ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಅಪರಾಧ ತಡೆ, ಭ್ರಷ್ಟಚಾರ ತಡೆ, ಸಾಕಷ್ಟು ಕಾನೂನುಗಳ ಅರಿವು ನೆರವು ಮುಖ್ಯವಾಗಿದ್ದು, ಇಂತಹ ಜಾಗೃತಿ ಕಾರ್ಯಕ್ರಮಗಳು ಅವರಿಗೆ ಉಪಯೊಗ ವಾಗಬಲ್ಲವು ಮತ್ತು ಮುಂಬರುವ ದಿನಗಳಲ್ಲಿ ನಮ್ಮ ವಿಶ್ವವಿದ್ಯಾನಿಲಯದಲ್ಲಿ ಕಾನೂನು ಜಾಗೃತಿ ಕಾರ್ಯಕ್ರಮಗಳು ಹೆಚ್ಚಾಗಿ ಹಮ್ಮಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಮತ್ತು ಹೆಚ್.ಆರ್.ಎ.ಸಿ.ಎಫ್ ರಾಷ್ಟ್ರೀಯ ಅಧ್ಯಕ್ಷರಾದ ಡಾ.ಮೋಹನ್ ರಾವ ನಾಲ್ವಡೆ ಅವರು ಮಾತನಾಡಿ, ದಿನನಿತ್ಯ ಕಣ್ಮುಂದೆ ಬರುವ ಕಾನೂನುಗಳ ಅರಿವು ಸರ್ವರಿಗೂ ಮುಖ್ಯ. ಯುವಕರು, ವಿದ್ಯಾರ್ಥಿಗಳು ತಾವು ಎಲ್ಲಾ ರೀತಿಯ ಕಾನೂನಿನ ಅರಿವು ಮೂಡಿಸಿಕೊಂಡು ಕಾನೂನಿನ ನೆರವನ್ನು ಅರಸುವವರಿಗೆ ಜಾಗೃತಿ ನೀಡಬೇಕು. ಭ್ರಷ್ಟಾಚಾರ ನಿರ್ಮೂಲನೆ ಮೊದಲು ನಮ್ಮಿಂದಲೇ ಆಗಬೇಕು. ಯಾವ ಆಮಿಷಕ್ಕೆ ಒಳಗಾಗದೇ ಬೇರೆಯವರ ಆಮೀಷವನ್ನು ಉತ್ತೇಜಿಸಬಾರದು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪಿ.ಆರ್.ಓ., ಮತ್ತು ಹಿರಿಯ ಸಿವಿಲ್ ನ್ಯಾಯಧೀಶರಾದ ಪಿ.ಎಂ.ಬಾಲಸುಬ್ರಮಣಿ ಅವರು ಮಾತನಾಡಿ, ಕಾನೂನು ಸಮಸ್ಯೆಗಳಿಗಾಗಿ ಸಹಾಯವಾಣಿ ಸಂಖ್ಯೆ 15100 ಮತ್ತು ಬಾಲ್ಯ ವಿವಾಹ ತಡೆಗಟ್ಟಲು ಸಹಾಯವಾಣಿ ಸಂಖ್ಯೆ 1098 ಕರೆಮಾಡಿ ವರದಿ ನೀಡಿ ಕಾನೂನಿನ ನೆರವು ಪಡೆದುಕೊಳ್ಳಬಹುದು ಎಂದು ಜಾಗೃತಿ ಮೂಡಿಸಿದರು.

ಹಿರಿಯ ನ್ಯಾಯಾವಾದಿಗಳಾದ ಶಿವಶಂಕರ ಎನ್., ಕಾನೂನು ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ರಾಜಾಶಂಕರ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಹಣಕಾಸು ಅಧಿಕಾರಿ ಡಾ.ಸುಯಮೀಂದ್ರ ಕುಲಕರ್ಣಿ, ಉಪ ಕುಲಸಚಿವರಾದ ಡಾ.ಕೆ.ವೆಂಕಟೇಶ್, ನವೋದಯ ಶಿಕ್ಷಣ ಮಹಾವಿದ್ಯಾಲಯದ ಕನ್ನಡ ಸಹಾಯಕ ಪ್ರಾಧ್ಯಾಪಕಿ ವಿಜಯಕುಮಾರಿ, ವಿವಿಯ ವಿವಿಧ ವಿಭಾಗಗಳ ಉಪನ್ಯಾಸಕರು, ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕನ್ನಡ ಸಹ ಪ್ರಾಧ್ಯಾಪಕರಾದ ಡಾ.ಶಿವಯ್ಯ ಹಿರೇಮಠ ನಿರೂಪಿಸಿದರು, ಹೆಚ್.ಆರ್.ಎ.ಸಿ.ಎಫ್ ಹಾಗೂ ವಾಲ್ಮೀಕಿ ವಿವಿಯ ಕಾನೂನು ಜಾಗೃತಿ ಸಮಿತಿಯ ಸಹ ಮುಖ್ಯಸ್ಥರಾದ ಪ್ರೊ.ಪ್ರಾಣೇಶ ಕುಲಕರ್ಣಿ ಪ್ರಾಸ್ತಾವಿಕ ಮಾತನಾಡಿದರು. ವಿವಿಯ ಗಣಿತ ವಿಭಾಗದ ವಿದ್ಯಾರ್ಥಿನಿ ರೂಪಶ್ರೀ ಪ್ರಾರ್ಥಿಸಿದರು, ನವೋದಯ ಶಿಕ್ಷಣ ಮಹಾವಿದ್ಯಾಲಯದ ಗಣಿತ ಸಹಾಯಕ ಪ್ರಾಧ್ಯಾಪಕಿ ಡಾ.ಉಮಾಶ್ರೀ ಬಿ.ಕೆ. ಸ್ವಾಗತಿಸಿದರು. ವಾಲ್ಮೀಕಿ ವಿವಿಯ ವಿದ್ಯಾರ್ಥಿ ಕಲ್ಯಾಣಾಧಿಕಾರಿ ಡಾ.ಜಿ.ಎಸ್.ಬಿರಾದಾರ ವಂದಿಸಿದರು.

ಈ ಸಂದರ್ಭದಲ್ಲಿ ಪರಿಸರ ಪ್ರೇಮಿ ಸಾಲು ಮರದ ತಿಮ್ಮಕ್ಕನ ಅಗಲಿಕೆಗೆ ಮೌನಾಚರಣೆ ಮೂಲಕ ಭಾವಪರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ಮಹಿಳೆಯರ, ಮಕ್ಕಳ ಸಾಗಣೆ ತಡೆ ಪ್ರತಿಯೊಬ್ಬ ನಾಗರಿಕರ ಜವಾಬ್ದಾರಿಯಾಗಿದೆ: ನ್ಯಾ.ಹೆಚ್.ಎ.ಸಾತ್ವಿಕ್ ಸಲಹೆ

ತುಂಬಾ ಅವಶ್ಯಕವಾಗಿತ್ತು. ಕಾರ್ಯಕ್ರಮ ಆಯೋಜಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯ ಮೆಚ್ಚುವಂತದ್ದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು, ಪ್ರವಾಸಿ ಮಿತ್ರರು ಹಾಗೂ ಸಾರ್ವಜನಿಕರು ಇದ್ದರು.

# ರಾಯಚೂರು ಮಹಾನಗರ ಪಾಲಿಕೆಯಿಂದ ಕಂದಾಯ ಅದಾಲತ್

ಸರ್ಕಾರು ಅನೇಕ ಜನಪರ ಯೋಜನೆಗಳನ್ನು ಜಾರಿ ತರುತ್ತದೆ. ಆದರೆ, ಅವುಗಳು ವ್ಯವಸ್ಥಿತವಾಗಿ ಅನುಷ್ಠಾನಗೊಳ್ಳುವುದಿಲ್ಲ. ಯೋಜನೆಗಳು ವ್ಯವಸ್ಥಿತವಾಗಿ ಅನುಷ್ಠಾಗೊಳ್ಳಬೇಕಾದರೆ ಅಧಿಕಾರಿಗಳು ಮನಸ್ಸು ಮಾಡಬೇಕು. ಮನಸ್ಸುಗೊಟ್ಟು ಕೆಲಸ ಮಾಡಿದರೆ ಮಾತ್ರ ಯೋಜನೆಗಳ ಲಾಭ ಯಾವ ರೀತಿ ಆಗುತ್ತದೆ ಎನ್ನುವುದಕ್ಕೆ ರಾಯಚೂರು ಮಹಾನಗರ ಪಾಲಿಕೆಯು ನಡೆಸುತ್ತಿರುವ ಇಂತಹ ಕಾರ್ಯಕ್ರಮಗಳೇ ಉದಾಹರಣೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಜೋನಲ್ -01 ಆಯುಕ್ತರಾದ ಮಲ್ಲಿಕಾರ್ಜುನ ಸೇರಿದಂತೆ ವಿವಿಧ ಭಾಗದ ಅಧಿಕಾರಿ, ಸಿಬ್ಬಂದಿ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111,9743496111

# ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೆ ಚೆನ್ನಾಗಿ ಓದಬೇಕು : ಅನುರಾಧ ಶಿಕ್ಷಕಿ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.14-** ವಿದ್ಯಾರ್ಥಿಗಳು ಸಮಯ ವ್ಯರ್ಥ ಮಾಡದೆ ಚೆನ್ನಾಗಿ ಓದಬೇಕು ಶಾಲೆಗೆ ಕೀರ್ತಿ ತರಬೇಕು ಎಂದು ಪಟ್ಟಣದ ಕೋನಾಪುರ ಪೇಟೆಯ ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕಿ ಅನುರಾಧ ವೆಂಕಟೇಶ್ ಅವರು ಹೇಳಿದರು.

ಅವರು ಶುಕ್ರವಾರದಂದು ಪಟ್ಟಣದ ಶ್ರೀ ಪಂಪಾ ವಿರೂಪಾಕ್ಷೇಶ್ವರ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಮಕ್ಕಳು ಟಿವಿ ಮೊಬೈಲಿಂದ ದೂರ ಇದ್ದು ಶ್ರದ್ದೆಯಿಂದ ಸತತ ಅಧ್ಯಯನದಲ್ಲಿ ತೊಡಗಬೇಕು. ಸಮಾಜದಲ್ಲಿ ಒಳ್ಳೆಯ ಮಕ್ಕಳಾಗಿ ಬಾಳಿರಿ ಎಂದು ಕಿವಿಮಾತು ಹೇಳಿದರು.

ಇನ್ನೊರ್ವ ಅತಿಥಿಗಳಾಗಿ ಆಗಮಿಸಿದ್ದ ಮಾನ್ವಿ ತಹಸೀಲ್ದಾರ್ ಕಛೇರಿಯಲ್ಲಿ ಕಂಪ್ಯೂಟರ ಡಾಟಾ ಎಂಟ್ರಿ ಆಪರೇಟರ್ ಆಗಿ ಸೇವೆ ಸಲ್ಲಿಸುತ್ತಿರುವ ನಿರ್ಮಲಾ ಚನ್ನಬಸವ ಗೌಡ ಇವರು ಮಾತನಾಡಿ, ಮಕ್ಕಳು ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ತಾಳ್ಮೆ, ಅಧ್ಯಯನಶೀಲತೆ ಬೆಳಸಿಕೊಳ್ಳಬೇಕು ಎಂದು ಹೇಳಿದರು

ಕಲ್ಮಠ ಪ್ರಾಥಮಿಕ ಶಾಲಾ ಮುಖ್ಯೋಪಾಧ್ಯಾಯ ಮಂಜುನಾಥ್ ಕಮತರ, ಪ್ರೌಢಶಾಲಾ ಶಿಕ್ಷಕಿ ಪ್ರಭಾವತಿ ಮಾತನಾಡಿದರು

ಕಲ್ಮಠ ಪ್ರೌಢಶಾಲೆಯ ಪ್ರಭಾರಿ ಮುಖ್ಯೋಪಾಧ್ಯಾಯಿನಿ ಬ್ರಮರಾಂಭ ಅಧ್ಯಕ್ಷತೆ ವಹಿಸಿಕೊಂಡಿದ್ದರು ಪ್ರೌಢಶಾಲಾ ಮುಖ್ಯ ಮಂತ್ರಿ ದೀಪ ರಾಘವೇಂದ್ರ ಉಪಮುಖ್ಯಮಂತ್ರಿ ಎಮ್. ಚಂದನ ವೆಂಕಟೇಶ್ ಪ್ರಾಥಮಿಕ ಶಾಲಾ ಮುಖ್ಯಮಂತ್ರಿ ಕಾವೇರಿ ಬಸವರಾಜ್ ಉಪಮುಖ್ಯಮಂತ್ರಿ ಅನಿಲ್ ಶಂಕರ್ ಶಾಲಾ ಮಂತ್ರಿಮಂಡಲದ ಸದಸ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಾದ ತನುಜಾ ,ವರ್ಷಿತ, ಶ್ರೀಗೌರಿ, ನೀಲಾವತಿ, ಪಲ್ಲವಿ, ಲಕ್ಷ್ಮಿ, ಶರಣಬಸವ, ಅನಿಸಿಕೆ ವ್ಯಕ್ತಪಡಿಸಿದರು

ಸ್ಕೌಟ್ಸ್ ಗೈಡ್ಸ್ ಮಾಸ್ಟರ್ ಕೇಮ್ಯಾನಾಯ್ಕ, ರವಿ ಹುಲಿಯಾಪೂರ, ಜಯಶ್ರೀ,ಪವಿತ್ರ, ಸೌಮ್ಯಾ, ಶಾಂತ ಸ್ವಾಮಿ, ನರಸಿಂಹ, ರಾಘವೇಂದ್ರ, ದೇವಪ್ಪ ಇನ್ನಿತರ ಶಿಕ್ಷಕರು ಭಾಗವಹಿಸಿದ್ದರು

ಕುಮಾರಿ ರಿಜ್ವಾನ ಬೇಗಮ್ ಕಾರ್ಯಕ್ರಮ ನಿರೂಪಿಸಿದರು ಶಿಕ್ಷಕಿ ರೂಪಾ ಸ್ವಾಗತಿಸಿದರು, ಮಹಾಂತಮ್ಮ ಶಿಕ್ಷಕಿ ವಂದಿಸಿದರು.

# ಬಿರುಸಿನಿಂದ ಸಾಗಿದ ನ್ಯಾಯವಾದಿಗಳ ಸಂಘದ ಚುನಾವಣೆ

ಯುವ ಮಾರ್ಗ ಸುದ್ದಿ



**ಸಿಂಧನೂರು:ನ.14-**ಸಿಂಧನೂರು ತಾಲೂಕ ನ್ಯಾಯವಾದಿಗಳ ಸಂಘದ ಚುನಾವಣೆಯಮತದಾನ ಜೋರಾಗಿ ನಡೆದಿದ್ದು, ವಿಜಯ ಮಾಲೆ ಯಾರಿಗೆ ಒಲಿಯುವದೆ ಎಂಬುದು ಕುತೂಹಲಕಾರಿಯಾಗಿದೆ. ಕಾರ್ಯದರ್ಶಿ ,ಖಜಾಂಚಿ ಸ್ಥಾನಗಳು ಅವಿರೋಧ ಆಯ್ಕೆ ಯಾದ ಬಳಿಕ ಇಂದು ಅಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿ ಯಲ್ಲಿರುವ ಕೆ.ಭೀಮನಗೌಡ ಹಾಗೂಪಂಪಣ್ಣ ತಮ್ಮದೇ ಆದ ರೀತಿಯಲ್ಲಿ ಮೇಟಿ ಮತಯಾಚನೆಯನ್ನು ಮಾಡಿದ್ದಾರೆ.320 ಮತಗಳಲ್ಲಿ - ಮಧ್ಯಾಹ್ನದ ಸಮಯಕ್ಕೆ 206 - । ಚಲಾವಣೆಯಾಗಿವೆಂದುಚುನಾವಣಾಧಿಕಾರಿ ಮಾಹಿತಿ ನೀಡಿದರು.

ಅಧ್ಯಕ್ಷಸ್ಥಾನದಲ್ಲಿ ಇಬ್ಬರು,ಉಪಾಧ್ಯಕ್ಷ ಸ್ಥಾನದಲ್ಲಿ ಮೂವರು ಜಂಟಿ ಇದ್ದು ಮತದಾನ ನಡೆದಿದೆ.4 ಕಾರ್ಯದರ್ಶಿ ಸ್ಥಾನದಲ್ಲಿ ಇಬ್ಬರು ಗಂಟೆ ವರೆಗೆ ಮತದಾನ ನಂತರ ಮತಎಕೆ ನಡೆಯುತ್ತದೆ ಎಂದು ತಿಳಿಸಿದರು.

# ವೃಕ್ಷ ಮಾತೆ ಸಾಲುಮರದ ತಿಮ್ಮಕ್ಕ ನಿಧನ ಅಮರೇಗೌಡ ಮಲ್ಲಾಪುರ ಸಂತಾಪ

ಯುವ ಮಾರ್ಗ ಸುದ್ದಿ



**ಸಿಂಧನೂರು : ನ.14-**ಪರಿಸರ ಪ್ರೇಮಿ,ವನಸಿರಿ ಪೌಂಡೇಷನ್ ಮಾರ್ಗದರ್ಶಕರು, ಕರ್ನಾಟಕ ಸರ್ಕಾರದ ಪರಿಸರ ರಾಯಭಾರಿ ವೃಕ್ಷ ಮಾತೆ ಸಾಲು ಮರದ ತಿಮ್ಮಕ್ಕ(114)ಅವರು ಇಂದು ಬೆಂಗಳೂರಿನ ಜಯನಗರ ಅಪೋಲೋ ಆಸ್ಪತ್ರೆಯಲ್ಲಿ ವಯೋ ಸಹಜ ಅನಾರೋಗ್ಯದಿಂದ ನಿಧನ ಹೊಂದಿದ್ದಾರೆ.ವೃಕ್ಷ ಮಾತೆ ನಿಧನಕ್ಕೆ ಪರಿಸರ ಪ್ರೇಮಿ, ಕರ್ನಾಟಕ ಪರಿಸರ ರಾಜ್ಯ ಪ್ರಶಸ್ತಿ ಪುರಸ್ಕೃತರು, ವನಸಿರಿ ಪೌಂಡೇಷನ್ (ರಿ) ರಾಯಚೂರು ಸಂಸ್ಥಾಪಕ ಅಧ್ಯಕ್ಷರಾದ ಅಮರೇಗೌಡ ಮಲ್ಲಾಪುರ ಅವರು ಮತ್ತು ಅವರ ತಂಡ ಸಂತಾಪ ಸೂಚಿಸಿದರು.

ಕನ್ನಡ ನಾಡಿನ ಹೆಮ್ಮೆಯ ಸಾಧಕಿ ಪದ್ಮ ಪ್ರಶಸ್ತಿ ಪುರಸ್ಕೃತೆ,ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ನಿಧನರಾಗಿದ್ದಾರೆ.ನವೆಂಬರ್ 2ರಿಂದ ಜಯನಗರ ಅಪೊಲೋ ಆಸ್ಪತ್ರೆಯಲ್ಲಿ ತಿಮ್ಮಕ್ಕ ಅವರು ಚಿಕಿತ್ಸೆ ಪಡೆದುಕೊಳ್ಳುತ್ತಿದ್ದರು.ಸಾಲುಮರದ ತಿಮ್ಮಕ್ಕ ಅವರಿಗೆ 114 ವರ್ಷ ವಯಸ್ಸಾಗಿತ್ತು.ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದರು.ಇವರ ನಿಧನದಿಂದ ವನಸಿರಿ ಪೌಂಡೇಷನ್ ಸಂಸ್ಥೆಗೆ ಅತೀವ ದುಃಖ ನೋವುಂಟಾಗಿದೆ.ತಿಮ್ಮಕ್ಕ ಅವರ ಪರಿಸರದಲ್ಲಿ ಗಿಡಮರಗಳನ್ನು ಬೆಳೆಸುವ ಮೇಲಿನ ಆಸಕ್ತಿ, ಅವರ ಹೊರಟಗಳು, ಮತ್ತು ಆದರ್ಶಗಳು ವನಸಿರಿ ತಂಡಕ್ಕೆ ಮಾರ್ಗದರ್ಶ ನಗಳಾಗಿ ದ್ದವು. ಅವರ ಅಗಲಿಕೆಗೆ ವನಸಿರಿ ತಂಡ ಸಂತಾಪ ಸುಚಿಸುತ್ತದೆ

# ಜಿಲ್ಲಾಡಳಿತದ ವಿರುದ್ಧ ದೇವದುರ್ಗದ ಶಾಸಕಿ ಕರೆಮ್ಮ ನಾಯಕ ತೀವ್ರ ಆಕ್ರೋಶ

ಅಪಮಾನವಲ್ಲ ತಾಲೂಕಿನ 2.5ಲಕ್ಷಮತದಾರರಿಗೆ ಮಾಡಿದ ಅಪಮಾನವಾಗಿದೆ.

ಸರ್ಕಾರ ನಾನು ಮಹಿಳೆ ಎನ್ನುವ ಕಾರಣಕ್ಕೆ ಟಾರ್ಗೇಟ್ ಮಾಡಿದೆ. ಈಹಿಂದೆ ಐಸಿಸಿ ಮಿಟಿಂಗ್‌ನಲ್ಲಿ, ಟೋಲ್‌ಗೇಟ್ ರದ್ದು ಸಂಬಂಧ ನಡೆದ ಸಭೆಯಲ್ಲಿ ನನ್ನನ್ನು ಟಾರ್ಗೇಟ್ ಮಾಡಿತ್ತು. ಟೋಲ್‌ಗೇಟ್ ವಿಷಯದಲ್ಲಿ ನನ್ನ ಕ್ಷೇತ್ರವನ್ನು ಟಾರ್ಗೇಟ್ ಮಾಡಿ ಕೇವಲ 40ಕಿಮೀ ಹಂತರದಲ್ಲಿ ಎರಡು ಟೋಲ್ ಗೇಟ್ ಹಾಕಿ ತಾಲೂಕಿನ ಜನರ ಜೀವನದ ಜತೆಗೆ ಚೆಲ್ಲಾಟವಾಡುತ್ತಿದೆ. ಈ ಬಗ್ಗೆ ನಾನು ನಿರಂತರವಾಗಿ ಹೊರಾಟ ಮಾಡಿದರೂ ಸರ್ಕಾರ ಸ್ಪಂದಿಸದೆ ಅನ್ಯಾಯ ಮಾಡುತ್ತಿದೆ.ಕೆಡಿಪಿ ಸಭೆಯಲ್ಲಿಟೋಲ್ ಗೇಟ್ ರದ್ದುಮಾಡುವುದಾಗಿ ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದ್ದರೂ ನನ್ನ ಗಮನಕ್ಕೆ ತಾರದೆ ರಾತ್ರೋರಾತ್ರಿ ಎರಡು ಟೋಲ್‌ಗೇಟ್ ಪ್ರಾರಂಭಿಸುವ ಮೂಲಕ ನನಗೆ ಅನ್ಯಾಯ । ಮಾಡಿದೆ. ಈಗ ನ್ಯಾಯಾಲಯ ಕಟ್ಟಡ ಉದ್ಘಾಟನೆ ಕಾರ್ಯಕ್ರಮಕ್ಕೆ ನನ್ನಗೆ ಆಹ್ವಾನ ಮಾಡದೆ ಉದ್ದೇಶ ಪೂರ್ವಕವಾಗಿ ಟಾರ್ಗೇಟ್ ಮಾಡಿದೆ.ನಾನು ಈ ಬಗ್ಗೆ ವಿಧಾನಸಭೆ ಸಭಾಪತಿ ಹಾಗೂ ವಿಧಾನ್ ಪರಿಷತ್ ಸಭಾಪಗತಿಗೆ ಹಕ್ಕು ಚ್ಯುತಿಯಾಗಿರುವ ಬಗ್ಗೆ ದೂರು ನೀಡುತ್ತೇನೆ. ಮುಂದಿನ ಅಧಿವೇಶನದಲ್ಲಿ ಅಸೆಂಬ್ಲಿಯಲ್ಲಿ ಪ್ರತಿಭಟನೆ ನಡೆಸುತ್ತೇನೆ. ಸರ್ಕಾರ ವಿರುದ್ಧ ನನ್ನ ಹೋರಾಟ ನಿರಂತರವಾಗಿ ಮುಂದುವರಿಯಲಿದೆ ಎಂದರು.

ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಅಮರೇಶ ಪಾಟೀಲ್, ಪ್ರಮುಖರಾದ ಚಂದಪ್ಪ ಅಕ್ಕರಕಿ, ಗೋವಿಂದ ನಾಯಕ, ಸಿದ್ದಯ್ಯ ತಾತ ಮುಂಡರಗಿ, ಮಲ್ಲಿಕಾರ್ಜುನ ಪಾಟಿಲ್, ಶಿವನಗೌಡ, ಸುಭಾಶ್‌ಗೌಡ, ಶಿವಕುಮಾರ ಮಾತಳ್ಳಿ, ಶರಣಗೌಡ ಸುಂಕೇಶ್ವರಹಾಳ, ಮಹಾದೇವಪ್ಪಗೌಡ ಚಿಕ್ಕಬೂದೂರು, ಬಸವರಾಜ ಯರಮಸಾಳ, ಮಹಿಬೂಬ್ ಗೌರಂಪೇಟೆ ಇತರರು ಉಪಸ್ಥಿತರಿದ್ದರು

# ಬಿಹಾರದಲ್ಲಿ ಅಭೂತಪೂರ್ವ ಜನಾದೇಶದೊಂದಿಗೆ ಮತ್ತೆ ಅಧಿಕಾರ ಹಿಡಿದ ಎನ್‌ಡಿಎ

**ನವದೆಹಲಿ, ನ.14–** ರಾಷ್ಟ್ರ ರಾಜಕಾರಣಕ್ಕೆ ಹೊಸ ದಿಕ್ಸೂಚಿ ಎಂದೇ ಹೇಳಲಾಗಿದ್ದ ಪ್ರತಿಷ್ಠಿತ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತ ವಿರೋಧಿ ಅಲೆಯನ್ನು ಹಿಂದಿಕ್ಕಿ ಎನ್‌ಡಿಎ ಅಭೂತಪೂರ್ವ ಜನಾದೇಶ ಪಡೆದು ಮತ್ತೆ ಅಧಿಕಾರಕ್ಕೆ ಬಂದಿದೆ. ರಾಜ್ಯದ ಒಟ್ಟು 243 ವಿಧಾನಸಭಾ ಕ್ಷೇತ್ರಗಳ ಪೈಕಿ ಎನ್‌ಡಿಎ ಮೈತ್ರಿಕೂಟ 190 ಸ್ಥಾನಗಳನ್ನು ಪಡೆದು ಈ ಬಾರಿ ಭಾರೀ ಜನಾದೇಶದೊಂದಿಗೆ ಅಧಿಕಾರ ಗದ್ದುಗೆ ಹಿಡಿದಿದೆ.

ಎನ್‌ಡಿಎ ಅಬ್ಬರಕ್ಕೆ ಪ್ರತಿಪಕ್ಷಗಳು ಧೂಳಿಪಟವಾಗಿದ್ದು, ಅಧಿಕೃತ ವಿರೋಧ ಪಕ್ಷದ ಸ್ಥಾನಕ್ಕೆ ಬೇಕಾದ ಸ್ಥಾನಗಳನ್ನು ಪಡೆಯಲೂ ವಿಫಲವಾಗಿವೆ. ಈ ಹಿಂದೆ 1999ರಲ್ಲಿ ಎನ್‌ಡಿಎ ಮೈತ್ರಿಕೂಟ ದ್ವಿಶತಕ ಬಾರಿಸಿ ದಾಖಲೆ ಬರೆದಿತ್ತು. ಎಲ್ಲ ರಾಜಕೀಯ ಲೆಕ್ಕಾಚಾರಗಳನ್ನು ತಲೆಕೆಳಗೆ ಮಾಡಿ ಮತ್ತೆ ಅಷ್ಟೆ? ಸ್ಥಾನಗಳನ್ನು ಪಡೆಯುವತ್ತ ದಾಪುಗಾಲಿಟ್ಟಿದೆ.

ಪ್ರತಿಪಕ್ಷಗಳ ಮೈತ್ರಿಕೂಟ ಮಹಾಘಟಬಂಧನ್ ಕೇವಲ 50 ಸ್ಥಾನಗಳನ್ನು ಪಡೆಯಲು ಶಕ್ತವಾಗಿದ್ದು, ಅಧಿಕಾರ ಹಿಡಿಯುವ ಕನಸು ನುಚ್ಚು ನೂರಾಗಿದೆ. ಮೈತ್ರಿಕೂಟದ ಮುಖ್ಯಮಂತ್ರಿ ಅಭ್ಯರ್ಥಿ ಎಂದೇ ಬಿಂಬಿತವಾಗಿದ್ದ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಹಾಗೂ ಮಾಜಿ ಸಿಎಂ ಲಾಲು ಪ್ರಸಾದ್ ಯಾದವ್, ಮತ್ತೊರ್ವ ಪುತ್ರ ತೇಜ್ ಪ್ರತಾಪ್ ಯಾದವ್ ಎರಡೂ ಕ್ಷೇತ್ರಗಳಲ್ಲಿ ತೀವ್ರ ಹಿನ್ನಡೆ ಅನುಭವಿಸಿದ್ದಾರೆ.

ಈ ಚುನಾವಣೆಯ ವಿಶೇಷವೆಂದರೆ ಆರ್‌ಜೆಡಿಗೆ ಈವರೆಗೂ ಬೆನ್ನೆಲುಬಾಗಿ ನಿಂತಿದ್ದ ಯಾದವರು ಈ ಬಾರಿ ಬಿಜೆಪಿ ಮತ್ತು ಜೆಡಿಯು ಬೆಂಬಲಿಸಿರುವುದು ಫಲಿತಾಂಶದಿಂದಲೇ ಸ್ಪಷ್ಟವಾಗಿದೆ.

ರಾಜ್ಯದ ಪಾಟ್ನಾ, ಮಗಧ್, ಸರಳ್, ತಿರಹಟ್, ದರ್ಬಾಂಗ, ಕೋಶಿ, ಪುರ್ನಿಯಾ, ಬಾಗಲ್ಪುರ, ಮುಂಗಾರ್ ಮತ್ತು ಸೀಮಾಂಚಲ ಸೇರಿದಂತೆ ಎಲ್ಲ ಪ್ರದೇಶಗಳಲ್ಲೂ ಎನ್‌ಡಿಎ ಇಂಡಿಯಾ ಮೈತ್ರಿಕೂಟವನ್ನು ಹಿಂದಿಕ್ಕಿ ಗೆಲುವು ಸಾಧಿಸಿದೆ.

ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮಿದ್ದು, ಸ್ಪರ್ಧಿಸಿದ್ದ 101 ಕ್ಷೇತ್ರಗಳ ಪೈಕಿ 85 ಕ್ಷೆ?ತ್ರಗಳನ್ನು ತನ್ನ ತೆಕ್ಕೆಗೆ ಹಾಕಿಕೊಂಡಿದೆ. ಮೈತ್ರಿ ಪಕ್ಷವಾದ ಜೆಡಿಯು 75 ಕ್ಷೇತ್ರಗಳಲ್ಲಿ ಗೆದ್ದಿದೆ. ಕಳೆದ ಬಾರಿ ಕೇವಲ 45 ಸ್ಥಾನಗಳನ್ನು ನಿತೀಶ್‌ಕುಮಾರ್ ಪಕ್ಷ ಗೆದ್ದಿತ್ತು. ಇನ್ನು ಎನ್‌ಡಿಎ ಮೈತ್ರಿಕೂಟದ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ನೇತೃತ್ವದ ಎಲ್‌ಜೆಪಿ ಕೂಡ ಅಚ್ಚರಿ ಎಂಬಂತೆ ನಿರೀಕ್ಷೆ ಮೀರಿ ಗೆಲುವು ಸಾಧಿಸಿದೆ. ಸ್ಪರ್ಧಿಸಿದ್ದ 29 ಕ್ಷೇತ್ರಗಳ ಪೈಕಿ 21 ಕ್ಷೆ?ತ್ರಗಳನ್ನು ಎಚ್‌ಎಎಂ 2 ಮತ್ತಿತರರು ಒಂದು ಸ್ಥಾನಕ್ಕೆ ತೃಪ್ತಿ ಪಟ್ಟಿದ್ದಾರೆ.

ಭಾರೀ ನಿರೀಕ್ಷೆ ಮೂಡಿಸಿದ್ದ ಆರ್‌ಜೆಡಿ ಕೇವಲ 35 ಸ್ಥಾನಗಳನ್ನು ಗೆದ್ದಿದ್ದರೆ, ವೋಟ್ ಚೋರಿ ಮತ್ತು ವೋಟ್ ಅಧಿಕಾರ್ ಮೂಲಕ ಅಬ್ಬರದ ಪ್ರಚಾರ ನಡೆಸಿದ್ದ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್‌ಗಾಂಧಿ ಅವರ ಕಾಂಗ್ರೆಸ್ ಪಕ್ಷ ಕೇವಲ ಆರು ಸ್ಥಾನಗಳಿಗೆ ಮಾತ್ರ ತೃಪ್ತಿ ಪಟ್ಟುಕೊಂಡಿದ್ದು, ಒಂದಂಕಿಗೆ ಇಳಿದಿದೆ.



ಇನ್ನು ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ದೇಶಾದ್ಯಂತ ಭಾರೀ ಸದ್ದು ಮಾಡಿದ್ದ ವೋಟ್ ಚೋರಿ ಆರೋಪಕ್ಕೆ ಮತದಾರ ಅಷ್ಟೊಂದು ಪ್ರಾಮುಖ್ಯ ಕೊಟ್ಟಿಲ್ಲ. ಅಲ್ಲದೆ ವಿಶೇಷ ಮತದಾರ ಪರಿಷ್ಕರಣೆ (ಎಸ್?ಐಆರ್) ನಡೆಸಿದ ಚುನಾವಣಾ ಆಯೋಗದ ಕ್ರಮಕ್ಕೂ ಮತದಾರ ಜೈ ಎಂದಿದ್ದು ಪ್ರತಿಪಕ್ಷಗಳ ವಿರೋಧಕ್ಕೂ ಮುಖಭಂಗವಾಗಿದೆ.

ಮೇಲ್ನೋಟಕ್ಕೆ ಈ ಚುನಾವಣೆಯಿಂದ ರಾಷ್ಟ್ರ ರಾಜಕಾರಣದಲ್ಲಿ ಹೇಳಿಕೊಳ್ಳುವಂತಹ ಯಾವುದೇ ಪರಿಣಾಮ ಬೀರುವುದಿಲ್ಲವಾದರೂ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಮತ್ತಷ್ಟು ಸುಭದ್ರವಾಗಿದ್ದು, ಮೈತ್ರಿಕೂಟ ಇಂಡಿಯಾ ಬ್ಲಾಕ್ ಭವಿಷ್ಯವೇ ಡೋಲಾಯಮಾನವಾಗಿದೆ.ಮುಂಬರುವ ತಮಿಳುನಾಡು, ಕೇರಳ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ಕಾಂಗ್ರೆಸ್ ಜೊತೆ ಪ್ರಾದೇಶಿಕ ಪಕ್ಷಗಳು ಮೈತ್ರಿ ಮಾಡಿಕೊಳ್ಳಬೇಕೆ ಎಂಬುದರ ಬಗ್ಗೆ ಮರು ಚಿಂತನೆಯನ್ನು ಮಾಡುವಂತೆ ಮಾಡಿದೆ ಈ ಫಲಿತಾಂಶ.ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರ ಡಬಲ್ ಎಂಜಿನ್ ಸರ್ಕಾರಕ್ಕೆ ಮತದಾರ ಬಹುಪರಾಕ್ ಎಂದಿರುವುದು ಫಲಿತಾಂಶದಿಂದಲೇ ಸಾಬೀತಾಗಿದೆ.

ಚುನಾವಣೆಗೂ ಮುನ್ನ ಮತದಾರರನ್ನು ಸೆಳೆಯಲು ಘೋಷಣೆ ಮಾಡಿದ್ದ ಭರಪೂರ ಗ್ಯಾರಂಟಿಗಳು ಕೂಡ ಎನ್‌ಡಿಎ ಕೈ ಹಿಡಿದಿವೆ.ಮಹಿಳೆಯರ ಖಾತೆಗೆ ರೂ.10,000 ಹಾಕಿದ್ದು, ಒಂದು ಕೋಟಿ ಸರ್ಕಾರಿ ಉದ್ಯೋಗ ಸೃಷ್ಟಿ, ಪ್ರತಿ ಜಿಲ್ಲೆಯಲ್ಲಿ ಮೆಗಾ ಕೌಶಲ್ಯ ಕೇಂದ್ರಗಳು ಮತ್ತು ಉನ್ನತ ಶಿಕ್ಷಣ ಪಡೆಯುತ್ತಿರುವ ಎಸ್‌ಸಿ ವಿದ್ಯಾರ್ಥಿಗಳಿಗೆ ತಿಂಗಳಿಗೆ 2000 ರೂ. ಆರ್ಥಿಕ ಸಹಾಯದಂತಹ ಪ್ರಮುಖ ಭರವಸೆಗಳು ಗೆಲುವಿಗೆ ಪೂರಕವಾಗಿವೆ.

ಜತೆಗೆ ಯುವಕರಿಗೆ ಸ್ವಯಂ ಉದ್ಯೊ?ಗಕ್ಕಾಗಿ 10 ಲಕ್ಷ ರೂ. ವರೆಗೆ ಆರ್ಥಿಕ ಸಹಾಯ, ಮುಖ್ಯಮಂತ್ರಿ ಮಹಿಳಾ ಉದ್ಯೊ?ಗ ಯೋಜನೆಯಡಿ ಜೀವಿಕಾ ದೀದಿಗಳಿಗೆ 2 ಲಕ್ಷ ರೂ. ವರೆಗೆ ಆರ್ಥಿಕ ಸಹಾಯ ಸೇರಿದಂತೆ ಹಲವು ಭರವಸೆಗಳಿಗೆ ಮತದಾರ ಜೈ ಎಂದಿದ್ದಾನೆ. ಕಳೆದ ಬಾರಿ ಎಲ್‌ಜೆಪಿ ಪಕ್ಷವು ಜೆಡಿಯುಗೆ ಭಾರೀ ಹಾನಿ ಮಾಡಿತ್ತು. ಇದರ ಸುಳಿವರಿತ ಬಿಜೆಪಿ ಅವರಿಗೆ 29 ಸ್ಥಾನಗಳನ್ನು ನೀಡುವ ಮೂಲಕ ಗೌರವವಾಗಿ ನಡೆಸಿಕೊಂಡಿತ್ತು. ಪರಿಣಾಮ ದಲಿತ ಮತಗಳು ಎನ್‌ಡಿಎಗೆ ಹೆಚ್ಚಿನ ಪ್ರಮಾಣದಲ್ಲಿ ಬಂದಿರುವುದು ಫಲಿತಾಂಶದಿಂದಲೇ ಕಂಡುಬಂದಿದೆ.

# ವೃಕ್ಷ ಮಾತೆ ಸಾಲುಮರದ ತಿಮಕ್ಕ ಇನ್ನಿಲ್ಲ

**ಬೆಂಗಳೂರು, ನ.14–** ಪದಶ್ರೀ ಪ್ರಶಸ್ತಿ ಪುರಸ್ಕೃತರಾದ ಸಾಲು ಮರದ ತಿಮಕ್ಕ (114) ಅವರು ಇಂದು ಪರಿಸರದಲ್ಲಿ ಲೀನವಾಗಿದ್ದಾರೆ.ವೃಕ್ಷಮಾತೆ ತಿಮಕ್ಕ ಅವರು ವಯೋಸಹಜ ಕಾಯಿಲೆಯಿಂದಾಗಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ನಿಧನರಾಗಿದ್ದಾರೆ. ಉಸಿರಾಟದ ಸಮಸ್ಯೆಯಿಂದ ನವೆಂಬರ್ ಎರಡರಂದು ಅವರು ಆಸ್ಪತ್ರೆಗೆ ದಾಖಲಾಗಿದ್ದರು. ಶುಕ್ರವಾರ ಮಧ್ಯಾಹ್ನ ಚಿಕಿತ್ಸೆ ಫಲಕಾರಿಯಾಗದೇ ಇಹಲೋಕ ತ್ಯಜಿಸಿದ್ದಾರೆ.

ಮರಗಳನ್ನು ನೆಟ್ಟು ಪೋಷಿಸುವ ಕಾರ್ಯಕ್ಕಾಗಿ 2019ರಲ್ಲಿ ಭಾರತ ಸರ್ಕಾರ ಪದಶ್ರೀ ಪ್ರಶಸ್ತಿ ನೀಡಿ ಗೌರವಿಸಲಾಗಿತ್ತು. ಅನಕ್ಷರಸ್ಥರಾಗಿದ್ದರೂ ಪರಿಸರ ಸಂರಕ್ಷಣೆಯಲ್ಲಿ ಮಹತ್ತರ ಕಾರ್ಯ ಮಾಡಿದ್ದಕ್ಕಾಗಿ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲನಿ ಯದಿಂದ ಗೌರವ ಡಾಕ್ಟರೇಟ್ ಪದವಿ, ಹಂಪಿ ವಿಶ್ವವಿದ್ಯಾಲಯದಿಂದ ನಾಡೋಜ ಪ್ರಶಸ್ತಿ ನೀಡಿ ಸನಾನಿಸಲಾಗಿತ್ತು.

ಅಂತರರಾಷ್ಟ್ರಿಯ, ರಾಷ್ಟ್ರಿಯ ಹಾಗೂ ರಾಜ್ಯಮಟ್ಟದ ಹಲವು ಪ್ರಶಸ್ತಿಗಳು, ಪುರಸ್ಕಾರಗಳು ಹಾಗೂ ಬಿರುದುಗಳು ಅವರಿಗೆ ಸಂದಿವೆ. ತಿಮಕ್ಕನವರು ಎಷ್ಟು ಮುಗ್ಧರಾಗಿದ್ದರೆಂದರೆ, ತಮಗೆ ಪ್ರಶಸ್ತಿ ನೀಡಿದ ರಾಷ್ಟ್ರಪತಿಗಳ ತಲೆಯ ಮೇಲೆ ಕೈಯಿಟ್ಟು ಆಶೀರ್ವಾದ ಮಾಡಿದ್ದರು. ಅಂದಿನ ರಾಷ್ಟ್ರಪತಿ ರಾಮನಾಥ ಕೋವಿಂದ್ ಅವರು ಕೂಡ ಅಷ್ಟೆ ಮುಗ್ಧತೆಯಿಂದ ಅವರ ಆಶೀರ್ವಾದ ಸ್ವಿಕರಿಸಿದ್ದರು.

1911ರ ಜೂನ್ 30ರಂದು ತಿಮಕ್ಕ ಅವರು ಜನಿಸಿದ್ದರು. ತುಮಕೂರು ಜಿಲ್ಲೆಯ ಗುಬ್ಬಿ ತಾಲ್ಲೂಕಿನವರಾಗಿದ್ದ ಅವರು, ಬೆಂಗಳೂರು ದಕ್ಷಿಣ ಜಿಲ್ಲೆ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದ ಬಿಕ್ಕಲ ಚಿಕ್ಕಯ್ಯ ಅವರನ್ನು ವಿವಾಹವಾದ ಬಳಿಕ ಹುಲಿಕಲ್‌ಗೆ ಬಂದು ನೆಲೆಸಿದರು.

ಬಹುಕಾಲ ಮಕ್ಕಳಾಗದ ದಂಪತಿ ತಮ ನೋವು ಮರೆಯಲು ಕುದೂರಿನಿಂದ ಹುಲಿಕಲ್ ತನಕವಿರುವ ರಾಜ್ಯ ಹೆದ್ದಾರಿ 94ರಲ್ಲಿ



ಇವರು ಬೆಳೆಸಿದ 385 ಆಲದ ಮರಗಳು ಇಂದಿಗೂ ನೂರಾರು ಪಕ್ಷಿಗಳಿಗೆ ಆಶ್ರಯ ನೀಡಿವೆ. ಬಿಸಿಲಲ್ಲಿ ಬಳಲಿ ಬಂದವರಿಗೆ ನೆರಳಾಗಿವೆ. ಇವರಿಂದ ಪ್ರೇರಣೆ ಪಡೆದು ನೂರಾರು ಯುವಕರು ವೃಕ್ಷ ಸಂವರ್ಧನೆ ಮಾಡಿದ್ದಾರೆ. ಅರಣ್ಯ ಇಲಾಖೆ ಸಾಲು ಮರದ ತಿಮಕ್ಕ ಅವರ ಹೆಸರಲ್ಲಿ ವೃಕ್ಷೋದ್ಯಾನಗಳನ್ನು ನಿರ್ಮಿಸಿದೆ. ಮರಗಳನ್ನು ರಕ್ಷಿಸಿದ ತಿಮಕ್ಕನವರು ಇಂದು ವಿಶ್ವ ಮಾನ್ಯರಾಗಿದ್ದಾರೆ.

ಸಂತಾಪ : ತಿಮಕ್ಕ ಅವರ ನಿಧನಕ್ಕೆ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ ಬೊಮಾಯಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಸಚಿವರು, ಶಾಸಕರು, ಹಲವು ಗಣ್ಯರು ಸಂತಾಪ ವ್ಯಕ್ತಪಡಿಸಿದ್ದಾರೆ.

ವೃಕ್ಷಮಾತೆ ಎಂದೇ ಖ್ಯಾತರಾಗಿದ್ದ ಸಾಲು ಮರದ ತಿಮಕ್ಕ ಅವರ ನಿಧನಕ್ಕೆ ಅರಣ್ಯ, ಸಚಿವ ಈಶ್ವರ ಬಿ.ಖಂಡ್ರೆ ಹಾಗೂ ಬಿಜೆಪಿ ಮುಖಂಡ ಎ.ಎಚ್. ಬಸವರಾಜ್ ಮತ್ತಿತರರು ಸಂತಾಪ ವ್ಯಕ್ತಪಡಿಸಿದ್ದಾರೆ.

# ಸೋಲಿನ ಶತಕ ರಾಹುಲ್‌ಗೆ ಅಭಿನಂದನೆ: ಅಶೋಕ್ ವ್ಯಂಗ್ಯ

**ಬೆಂಗಳೂರು, ನ.14–** ಚುನಾವಣಾ ಸೋಲಿನ ಶತಕದೆಡೆಗೆ ಹೆಜ್ಜೆ ಹಾಕುತ್ತಿರುವ ಕಾಂಗ್ರೆಸ್‌ನ ರಾಹುಲ್‌ಗಾಂಧಿಯವರಿಗೆ ಅಭಿನಂದನೆಗಳು ಎಂದು ರಾಜ್ಯ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ವ್ಯಂಗ್ಯವಾಡಿದ್ದಾರೆ.

ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಭಾರೀ ಬಹುಮತ ಗಳಿಸಿರುವ ಬೆನ್ನಲ್ಲೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಆಕಾಶದಲ್ಲಿರುವ ನಕ್ಷತ್ರಗಳನ್ನು ಎಣಿಸಿ ಬಿಡಬಹುದೇನೋ ಆದರೆ ರಾಹುಲ್‌ಗಾಂಧಿಯವರು ಕಾಂಗ್ರೆಸ್ ಪಕ್ಷವನ್ನು ಎಷ್ಟು ಚುನಾವಣೆಯಲ್ಲಿ ಸೋಲಿಸಿದ್ದಾರೆ ಎನ್ನುವುದನ್ನು ಲೆಕ್ಕ ಮಾಡುವುದು ಕಷ್ಟ ಎಂದು ಲೇವಡಿ ಮಾಡಿದ್ದಾರೆ.

ಸುಶಾಸನ, ಭ್ರಷ್ಟಾಚಾರ ಮುಕ್ತ ಆಡಳಿತ, ಅಭಿವೃದ್ಧಿ ರಾಜಕಾರಣದಿಂದ ಜನ ಮನ್ನಣೆ ಗಳಿಸಿರುವ ನಿತೀಶ್‌ಕುಮಾರ್ ನೇತೃತ್ವದ ಎನ್‌ಡಿಎ ಸರ್ಕಾರದ ಮುಂದೆ ಜಂಗಲ್ ರಾಜ್ ಕುಖ್ಯಾತಿಯ ಆರ್‌ಜೆಡಿ–ಕಾಂಗ್ರೆಸ್ ಮಹಾಘಟ ಬಂಧನ ಗೆಲ್ಲಲು ಸಾಧ್ಯವೇ ಇಲ್ಲ ಎಂದು ಕಾಂಗ್ರೆಸ್ ಪಕ್ಷಕ್ಕೆ ಚೆನ್ನಾಗಿ ಗೊತ್ತಿತ್ತು. ಹಾಗಾಗಿಯೇ ಸೋಲಿನ ಮುಖಭಂಗ ತಪ್ಪಿಸಿಕೊಳ್ಳಲು ಮತಗಳ್ಳತನ ಎಂಬ ಕಟ್ಟು ಕಥೆಯ ಮೂಲಕ ಜನರನ್ನು ದಿಕ್ಕು ತಪ್ಪಿಸಲು ಹೊರಟಿತ್ತು. ಆದರೆ ಬಿಹಾರದ ಪ್ರಜ್ಞಾವಂತ ಮತದಾರರು ಕಾಂಗ್ರೆಸ್ ಪಕ್ಷ



ಮತ್ತು ರಾಹುಲ್‌ಗಾಂಧಿಯವರ ಮತಗಳ್ಳತನ ಪ್ರಹಸನವನ್ನು ಸಾರಾಸಗಟಾಗಿ ತಿರಸ್ಕರಿಸಿ ಎನ್‌ಡಿಎಗೆ ಸ್ಪಷ್ಟ ಜನಾದೇಶ ನೀಡಿದ್ದಾರೆ. ಬಿಹಾರ ಮತದಾರರಿಗೆ ಅಭಿನಂದನೆಗಳು ಎಂದು ಆರ್. ಅಶೋಕ್ ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷಕ್ಕೆ ಹರಿಯಾಣ, ಮಹಾರಾಷ್ಟ್ರ, ಬಿಹಾರದಲ್ಲಿ ಬಂದಿರುವ ಸ್ಥಿತಿ ಕರ್ನಾಟಕದಲ್ಲೂ ಬರುವ ದಿನ ಬಹಳ ದೂರವಿಲ್ಲ. ಈಗಾಗಲೇ ಜನ ಮನ್ನಣೆ ಕಳೆದುಕೊಂಡಿರುವ ಕಾಂಗ್ರೆಸ್ ಪಕ್ಷ ಕರ್ನಾಟಕದಲ್ಲೂ ಧೂಳೀಪಟವಾಗುವುದು ನೂರಕ್ಕೆ ನೂರರಷ್ಟು ಗ್ಯಾರಂಟಿ ಎಂದು ಅವರು ಟ್ವೀಟ್ ಮಾಡಿದ್ದಾರೆ.

# ಅಧಿಕಾರಿಗಳ ಭರವಸೆಗೆ ಕಿಸಾನಸಭಾ ಪಾದಯಾತ್ರೆ ಧರಣಿ ತಾತ್ಕಾಲಿಕ ಅಂತ್ಯ



**ಆಳಂದ, ನ.14–**ತಾಲೂಕಿನ ರೈತರು ಮತ್ತು ಕೃಷಿ ಕೂಲಿ ಕಾರ್ಮಿಕರ ಬೇಡಿಕೆಗಳಿಗಾಗಿ ಅಖಿಲ ಭಾರತ ಕಿಸಾನ್ ಸಭೆ (ಎಐಕೆಎಸ್) ವತಿಯಿಂದ ತಾಲೂಕು ಪಂಚಾಯಿತಿ ಕಚೇರಿ ಮುಂದೆ ನಡೆಯುತ್ತಿದ್ದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹವನ್ನು ಗುರುವಾರ ತಾತ್ಕಾಲಿಕವಾಗಿ ವಾಪಸ್ ಪಡೆಯಲಾಯಿತು.

ಬುಧವಾರ ಮಟಕಿ ಗ್ರಾಮದಿಂದ 9 ಕಿ.ಮೀ. ಪಾದಯಾತ್ರೆಯ ಮೂಲಕ ಆರಂಭಗೊಂಡಿದ್ದ ಈ ಹೋರಾಟಕ್ಕೆ ಎರಡನೇ ದಿನದಂದು ತಾಲೂಕು ಮಟ್ಟದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಮನವಿ ಸ್ವೀಕರಿಸಿ ಭರವಸೆ ನೀಡಿದ ಹಿನ್ನೆಲೆಯಲ್ಲಿ ರೈತ ನಾಯಕರು ಧರಣಿಯನ್ನು ಮುಂದೂಡಿದ್ದಾರೆ. ಆದರೆ ಬೇಡಿಕೆಗಳು ಈಡೇರದಿದ್ದರೆ ಮತ್ತೆ ಹೋರಾಟ ತೀವ್ರಗೊಳಿಸುವುದಾಗಿ ಎಐಕೆಎಸ್ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಧರಣಿ ಸ್ಥಳಕ್ಕೆ ತಾಲೂಕು ಪಂಚಾಯಿತಿ ಉದ್ಯೋಗ ಖಾತ್ರಿ ಸಹಾಯಕ ನಿರ್ದೇಶಕ ಸೋಮಶೇಖರ್, ಪ್ರಭಾರಿ ಸಹಾಯಕ ಕೃಷಿ ನಿರ್ದೇಶಕ ಬನಸಿದ್ಧ ಬಿರಾದಾರ್, ಜಿಲ್ಲಾ ಪಂಚಾಯಿತಿ ವ್ಯವಸ್ಥಾಪಕ ಗಣಪತಿ ಚೌದ್ರಿ ಸೇರಿದಂತೆ ಪಶುಸಂಗೋಪನೆ ಮತ್ತು ಲೋಕೋಪಯೋಗಿ ಇಲಾಖೆಯ ಸಿಬ್ಬಂದಿಗಳು ಭೇಟಿ ನೀಡಿದರು.

ರೈತ ನಾಯಕರೊಂದಿಗೆ ಮಾತುಕತೆ ನಡೆಸಿದ ಅಧಿಕಾರಿಗಳು, ಬೆಳೆ ವಿಮೆ ಬಿಡುಗಡೆ, ದನದ ಕೊಟ್ಟಿಗೆ ಮತ್ತು ಕುರಿ ದೊಡ್ಡಿ ನಿರ್ಮಾಣ, ರೈತರ ಸಾಲ ಮನ್ನಾ, ಖಜೂರಿ ವಲಯದಲ್ಲಿ 25 ಕಡೆಗಳಲ್ಲಿ ಬ್ರೀಜ್ ಕಂ ಬ್ಯಾರೇಜ್ ನಿರ್ಮಾಣ ಹಾಗೂ 'ನಮ್ಮ ಹೊಲ ನಮ್ಮ ರಸ್ತೆ' ಯೋಜನೆಯ ಜಾರಿಗೆ ಸಂಬಂಧಿಸಿದ ಮನವಿಯನ್ನು ಸ್ವೀಕರಿಸಿದರು.

"ಈ ಬೇಡಿಕೆಗಳನ್ನು ಶೀಘ್ರವಾಗಿ ಪರಿಗಣಿಸಿ, ಸಂಬಂಧಪಟ್ಟ ಇಲಾಖೆಗಳ ಮೂಲಕ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳ ಗಮನಕ್ಕೆ ತಂದು ಮನವಿ ಮಾಡುತ್ತೇವೆ. ರೈತರ ಸಮಸ್ಯೆಗಳಿಗೆ ಆದ್ಯತೆ ನೀಡಿ ಪರಿಹಾರ ಒದಗಿಸುತ್ತೇವೆ" ಎಂದು ಅಧಿಕಾರಿಗಳು ಭರವಸೆ ನೀಡಿದರು.ಈ ಭರವಸೆಯ ಹಿನ್ನೆಲೆಯಲ್ಲಿ ಎಐಕೆಎಸ್ ನಾಯಕರು ಧರಣಿಯನ್ನು ತಾತ್ಕಾಲಿಕವಾಗಿ ವಾಪಸ್ ಪಡೆದುಕೊಂಡಿದ್ದಾರೆ. ಆದರೆ, "ಅಧಿಕಾರಿಗಳ ಭರವಸೆಗಳು ಕಾರ್ಯರೂಪಕ್ಕೆ ಬರದಿದ್ದರೆ, ಮತ್ತೆ ತೀವ್ರ ಹೋರಾಟಕ್ಕೆ ಮುಂದಾಗುತ್ತೇವೆ. ರೈತರ ಸಮಸ್ಯೆಗಳು ದೀರ್ಘಕಾಲದಿಂದಲೂ ನಿರ್ಲಕ್ಷ್ಯಕ್ಕೊಳಗಾಗಿವೆ. ಸರ್ಕಾರ ಶೀಘ್ರ ಕ್ರಮಕ್ಕೆ ಮುಂದಾಗಬೇಕು" ಎಂದು ಕಿಸಾನಸಭಾ ರಾಜ್ಯ ಕಾರ್ಯದರ್ಶಿ ಮೌಲಾ ಮುಲ್ಲಾ ಅವರು ಅವರು ಎಚ್ಚರಿಸಿದರು.

"ದನದ ಕೊಟ್ಟಿಗೆ ಮತ್ತು ಕುರಿ ದೊಡ್ಡಿ ಯೋಜನೆಗಳು 15 ವರ್ಷಗಳಿಂದಲೂ ಸರಿಯಾಗಿ ಜಾರಿಯಾಗಿಲ್ಲ. ಪ್ರತಿ ವರ್ಷ 30 ಸಾವಿರಕ್ಕೂ ಹೆಚ್ಚು ಕುರಿಮರಿಗಳ ಸಾವು ಮತ್ತು 30,000 ಕೋಟಿಗೂ ಹೆಚ್ಚು ಆರ್ಥಿಕ ನಷ್ಟವನ್ನು ತಪ್ಪಿಸಲು ಇಲಾಖೆಗಳು ಕ್ರಮ ಕೈಗೊಳ್ಳಬೇಕು" ಎಂದು ತಡೋಳಾ ಗ್ರಾಪಂ ಮಾಜಿ ಅಧ್ಯಕ್ಷ ಮೈಲಾರಿ ಜೋಗೆ ಅವರು ಹೇಳಿದು.

ಧರಣಿಯಲ್ಲಿ ಹಿರೋಳಿ ರೈತ ರಾಜಶೇಖರ ಬಸ್ಮೆ, ಆಶ್ಫಾಕ್ ಮುಲ್ಲಾ, ರೈತ ಕಲ್ಯಾಣಿ ಅವುಟೆ, ಗೋವಿಂದ ಗಾಯಕವಾಡ, ಮಹಾದೇವ ಪೂಜಾರಿ, ತ್ರೀಮುಖ ಸಿಂಧೆ, ವೆಂಕಟರಾವ್, ಮನೋಜ ಗಾವಡೆ, ಕಮಲೇಶ ಸಗರ, ಭಗವಾನ ಪಾಟೀಲ, ರತನಚಂದ ಕಲಶೆಟ್ಟಿ, ಸಾತಣ್ಣಾ ಜಮಾದಾರ, ಜನಾಬಾಯಿ ಚವ್ಹಾಣ, ಗುರುಬಾಯಿ ಚವ್ಹಾಣ, ಫಕ್ರೋದ್ದೀನ್ ಗೋಳಾ ಸೇರಿದಂತೆ ಅನೇಕ ರೈತರು ಮತ್ತು ಮಹಿಳಾ ಕಾರ್ಯಕರ್ತರು ಭಾಗವಹಿಸಿದ್ದರು.

# ಜಿಲ್ಲಾಧಿಕಾರಿ ನೇತೃತ್ವದ ಸಭೆ ವಿಫಲ : ಕಬ್ಬಿಗೆ ರೂ.3,300 ದರದ ಒತ್ತಾಯ, ರೈತರ ಧರಣಿ



**ಬೀದರ್,ನ.14–**ಸರ್ಕಾರ ಘೋಷಿಸಿರುವ ಪ್ರತಿ ಟನ್ ಕಬ್ಬಿಗೆ ರೂ.3,300 ದರವನ್ನು ಬೀದರ್ ಜಿಲ್ಲೆಯಲ್ಲಿ ಕೂಡ ಜಾರಿಗೆ ತರಬೇಕೆಂದು ಆಗ್ರಹಿಸಿ, ರೈತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಪ್ರವಾಸಿ ಮಂದಿರದ ಎದುರು ರೈತರು ಸರ್ಕಾರದ ವಿರುದ್ಧ ಘೋಷಣೆ ಗಳನ್ನು ಕೂಗುತ್ತ ಧರಣಿ ನಡೆಸಿದರು.

ಕಬ್ಬು ಬೆಲೆ ನಿಗದಿ ಕುರಿತು ಇಂದು ಜಿಲ್ಲಾಧಿಕಾರಿ ನೇತೃತ್ವದಲ್ಲಿ ನಡೆದ ಸಭೆ ವಿಫಲವಾಗಿದೆ. "ರೈತರ ಕಣ್ಣೀರು ಒರೆಸುವ ಕೆಲಸ ಆಡಳಿತದಿಂದ ಆಗಬೇಕು, ಕಣ್ಣೊರೆಸುವ ನಾಟಕ ಬೇಡ" ಎಂದು ರೈತ ನಾಯಕರು ಖಂಡಿಸಿದರು.

ಅತಿವೃಷ್ಟಿಯಿಂದ ಮುಂಗಾರಿನ ಪ್ರಮುಖ ಬೆಳೆಗಳು ಹಾನಿಗೊಳ ಗಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಪ್ರಸ್ತುತ ಜಿಲ್ಲೆಯ ಸುಮಾರು 50 ಸಾವಿರ ಎಕರೆಯಲ್ಲಿ ಕಬ್ಬು ಬೆಳೆ ಬೆಳೆಯಲಾಗಿದ್ದು, 15 ಲಕ್ಷ ಟನ್‌ಗಳಿಗಿಂತ ಅಧಿಕ ಉತ್ಪಾದನೆ ನಿರೀಕ್ಷೆಯಿದೆ. ಈ ಪರಿಸ್ಥಿತಿಯಲ್ಲಿ ರೈತರಿಗೆ ನ್ಯಾಯಯುತ ಬೆಲೆ ನೀಡಬೇಕು ಎಂದು ಆಗ್ರಹಿಸಲಾಗಿದೆ.

ರೈತ ಸಂಘಟನೆಗಳು 2025–26ನೇ ಸಾಲಿನ ಕಬ್ಬು ಬೆಲೆ ಪ್ರತಿ ಟನ್‌ಗೆ ಕನಿಷ್ಠ ರೂ.3,300 ನಿಗದಿಪಡಿಸಲು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಕಡ್ಡಾಯವಾಗಿ ಪಾವತಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಬೇಡಿಕೊಂಡಿವೆ.

ಧರಣಿಯಲ್ಲಿ ರೈತ ಮುಖಂಡರಾದ ಮಲ್ಲಿಕಾರ್ಜುನ ಸ್ವಾಮಿ, ಸಿದ್ರಾಮಪ್ಪಾ ಆಣದೂರೆ, ಶ್ರೀಮಂತ ಬಿರಾದಾರ, ದಯಾನಂದ ಸ್ವಾಮಿ, ಶಂಕರೆಪ್ಪಾ ಮರ್ಕಲ್, ಕೊಂಡಿಬಾ ಪಾಂಡ್ರೆ, ಶಿವರಾಜ ಪಾಟೀಲ್, ಬಾಬು ಹೊನ್ನಾ, ನಜೀರ್ ಅಹ್ಮದ್ ಚೊಂಡಿ, ಪ್ರಕಾಶ ಬಾವುಗೆ, ಶಾಂತಮ್ಮ ಮೂಲಗೆ, ಶಿವಲೀಲಾ ಹೋಳಸಮು ದ್ರ, ವಿಜಯಕುಮಾರ ಬಾವುಗೆ, ವೀರಾರೆಡ್ಡಿ, ವಿಠಲ್ ರಾವ, ನಾಗಶೆಟ್ಟಿ, ಭೀಮರಾವ, ಖಮರ ಪಟೇಲ್ ಸೇರಿದಂತೆ ಅನೇಕ ರೈತ ನಾಯಕರು ಉಪಸ್ಥಿತರಿದ್ದರು.

ಯುವ ಮಾರ್ಗ

ಶನಿವಾರ: 15–11–2025

## ಸಚಿವರಾದ ಎನ್.ಎಸ್.ಬೋಸರಾಜು ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು,ನ.14–**ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ನವೆಂಬರ್ 15 ಹಾಗೂ 16 ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ನವೆಂಬರ್ 15ರ ಬೆಳಿಗ್ಗೆ 10ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯುವ 72ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ 12 ಗಂಟೆಗೆ ಜಿಲ್ಲೆಯ ಮಾನ್ವಿಗೆ ಪ್ರಯಾಣ ಬೆಳೆಸಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

ಸಂಜೆ 4.30ಕ್ಕೆ ನಡೆಯುವ ರಾಯಚೂರು ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ನವೆಂಬರ್ 16ರ ರಾತ್ರಿ 9.40ಕ್ಕೆ ರಾಯಚೂರಿನ ಎಸ್.ಬಿ.ಸಿ. ರಾಜಧಾನಿ ಎಕ್ಸ್ಪ್ರೆಸ್ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ಯಾನರ್ ಅಳವಡಿಸಲು ಪಾಲಿಕೆಯಿಂದ ಅನುಮತಿ ಕಡ್ಡಾಯ

**ರಾಯಚೂರು,ನ.14–**ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ವಿವಿಧ ವೃತ್ತಗಳು, ರಸ್ತೆಯ ಪಕ್ಕದಲ್ಲಿ, ರಸ್ತೆಯ ಡಿವೈಡರ್ ಮೇಲೆ ಬ್ಯಾನರ್‌ಗಳನ್ನು ಪಾಲಿಕೆಯ ಅನುಮತಿಯನ್ನು ಪಡೆಯದೇ ಅನಧಿಕೃತವಾಗಿ ಅಳವಡಿಸಿರುವುದು ಕಂಡುಬಂದಿದ್ದು, ಈ ಬ್ಯಾನರ್‌ಗಳನ್ನು ಅಳವಡಿಸಲು ಪಾಲಿಕೆಯ ಅನುಮತಿಯನ್ನು ಪಡೆದುಕೊಳ್ಳಲು ಸೂಚಿಸಿಲಾಗಿದೆ.

ಒಂದುವೇಳೆ ಅನುಮತಿ ಪಡೆಯದೇ ಬ್ಯಾನರ್ ಅಳವಡಿಸಿದ್ದಲ್ಲಿ ಅವುಗಳನ್ನು ತೆರವುಗೊಳಿಸಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.15 ರವರೆಗೆ ವಕೀಲರ ಸಂಘದ ವಿವಿಧ ಸ್ಥಾನಗಳಿಗಾಗಿ ನಾಮ ಪತ್ರ ಸಲ್ಲಿಸಬಹುದಾಗಿದೆ : ಕೆ.ಶ್ರೀನಿವಾಸರಾವ್

**ಮಾನ್ವಿ,ನ.14–** ಪಟ್ಟಣದ ವಕೀಲರ ಸಂಘದ ಕಚೇರಿಯಲ್ಲಿ ತಾ. ವಕೀಲರ ಸಂಘದ ಚುನಾವಣಾಧಿಕಾರಿ ಕೆ.ಶ್ರೀನಿವಾಸರಾವ್ ಮಾತನಾಡಿ ಮಾನ್ವಿ ತಾಲೂಕು ವಕೀಲರ ಸಂಘದ ವಿವಿಧ ಸ್ಥಾನಗಳಿಗಾಗಿ ಚುನಾವಣೆ ಘೋಷಣೆಯಾಗಿದು ವಕೀಲರ ಸಂಘದ ಅಧ್ಯಕ್ಷ ಒಂದು ಹುದ್ದೆ, ಉಪಾಧ್ಯಕ್ಷ 2 ಹುದ್ದೆ, ಸಾಮಾನ್ಯ ಕಾರ್ಯದರ್ಶಿ 1 ಹುದ್ದೆ ಸಾಮಾನ್ಯ ಮೀಸಲಾತಿ, ಖಜಾಂಚಿ 1 ಮಹಿಳಾ ಮೀಸಲಾತಿ, ಜಂಟಿ ಕಾರ್ಯದರ್ಶಿ 2 ಹುದ್ದೆಗಳಿಗೆ 1 ಸಾಮಾನ್ಯ 1 ಮಹಿಳಾ ಮೀಸಲಾತಿಯನ್ನು ಹೊಂದಿದ್ದೆ. ಒಟ್ಟು ತಾಲೂಕಿನಲ್ಲಿ ವಕೀಲರ ಸಂಘವು 234 ಮತದಾರರನ್ನು ಹೊಂದಿದ್ದು .ನಾಮ ಪತ್ರವನ್ನು ನ.13 ರಿಂದ ನ.15 ರವರೆಗೆ ಬೆಳಿಗ್ಗೆ 11 ರಿಂದ 2 ಗಂಟೆಯವರೆಗೆ ಚುನಾವಣಾಧಿಕಾರಿಗಳಿಗೆ ನಾಮಪತ್ರವನ್ನು ವಕೀಲರ ಸಂಘದ ಕಾರ್ಯಾಲಯದಲ್ಲಿ ಸಲ್ಲಿಕ್ಕೆಗೆ ಅವಕಾಶವಿದೆ ನ.17 ರಂದು ನಾಮಪತ್ರವನ್ನು ಪರಿಶೀಲಿಸಲಾಗುವುದು. ನ.18 ರಂದು 11 ರಿಂದ 2 ರವರೆಗೆ ನಾಮಪತ್ರವನ್ನು ಹಿಂಪಡೆಯುವುದಕ್ಕೆ ಅವಕಾಶ ಕಲ್ಪಿಸಿದ್ದು.ಅಂತಿಮ ಪಟ್ಟಿಯನ್ನು ನ.18 ರಂದು ಸಂಜೆ 4ಕ್ಕೆ ಘೋಷಣೆ ಮಾಡಲಾಗುವುದು ಅಗತ್ಯ ಬಿದಲ್ಲಿ ನ.23 ರಂದು ಬೆ.10ರಿಂದ 4 ರವರೆಗೆ ಮತದಾನ ನಡೆಯಲಿದೆ, ಸಂಜೆ 5 ಕ್ಕೆ ಮತ ಏಣಿಕೆ ನಡೆಸಿದ ನಂತರ ಫಾಲಿತಾಂಶವನ್ನು ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.ಮಾನ್ವಿ ತಾಲೂಕು ವಕೀಲರ ಸಂಘದ ಸಹಾಯಕ ಚುನಾವಣಾಧಿಕಾರಿ ಅರವಿಂದ ದೇಸಾಯಿ ಇದ್ದರು.

## ವಿದ್ಯಾರ್ಥಿಗಳ ಬಾಳಿಗೆ ಗುಣಮಟ್ಟದ ಶಿಕ್ಷಣ ಅವಶ್ಯಕ : ಹನುಮಂತ ಜಗಲಿ




ಯುವ ಮಾರ್ಗ ಸುದ್ದಿ

**ದೇವದುರ್ಗ,ನ.14–** ವಿದ್ಯಾರ್ಥಿ ವಿದ್ಯಾರ್ಥಿನಿಯರು ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ಸಾವಲಂಬಿ ಬದುಕು ರೂಪಿಸಿಕೊಳ್ಳಬೇಕು ಎಂದು ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಹನುಮಂತ ಜಗಲಿ ಹೇಳಿದರು.

ಸ್ವಾಮಿ ವಿವೇಕಾನಂದ ಕಾಲೇಜನಲ್ಲಿ ಆಯೋಜಿಸಿದ ಮಕ್ಕಳ ದಿನಾಚರಣೆ ಹಾಗೂ ಪ್ರಥಮ ವರ್ಷದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಶುಕ್ರವಾರ ಮಾತನಾಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಪಾದಕರು ಅಧ್ಯಕ್ಷರಾದ ಬಸಣ್ಣ ನಾಯಕ ಇಒ, ಪ್ರಾಚಾರ್ಯರಾದ ಶಿವಗೇನಿ ನಾಯಕ, ಮುನಿಯಪ್ಪ ನಾಗೋಲಿ,ಬಾಬು ಅಲಿ ಕರಿಗುಡ್ಡ, ಶಿವರಾಜ ನಾಯಕ, ಯಲ್ಲಪ್ಪ, ಸೇರಿದಂತೆ ಅನೇಕರು ಇದ್ದರು.

# ಬಿ.ವಿ.ಆರ್ ಶಿಕ್ಷಣ ಸಂಸ್ಥೆಯಲ್ಲಿ ಮಕ್ಕಳ ದಿನಾಚರಣೆ ಆಚರಣೆ



ಯುವ ಮಾರ್ಗ ಸುದ್ದಿ

**ಮಾನ್ವಿ,ನ.14–**ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆಯ ಸಭಾಂಗಣದಲ್ಲಿ ಬಿ.ವಿ.ಆರ್ ಎಜ್ಯುಕೇಶನ್ ಟ್ರಸ್ಟ್ ವತಿಯಿಂದ ದೇಶದ ಪ್ರಥಮ ಪ್ರಧಾನಿ ಪಂಡಿತ ಜವಹಾರ್ ಲಾಲ್ ನೆಹರು ರವರ ಜಯಂತಿ ಅಂಗವಾಗಿ ಜವಹಾರ್ ಲಾಲ್ ನೆಹರು ರವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಆಚರಿಸಿ ಬಿ.ವಿ.ಆರ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಬಿ.ವಿ.ರೆಡ್ಡಿ ಮಾತನಾಡಿ ಭಾರತದ ಪ್ರಥಮ ಪ್ರಧಾನಿ ಪಂಡಿತ ಜವಹಾರ್ ಲಾಲ್ ನೆಹರು ರವರು ಮಕ್ಕಳ ಮೇಲೆ ಅತ್ಯಂತ ಪ್ರೀತಿಯುಳ್ಳವರಾಗಿದ್ದರು ಅದ್ದರಿಂದ ಅವರು ತಮ್ಮ ಜನ್ಮದಿನವನ್ನು ಮಕ್ಕಳದಿನಾಚರಣೆಯನ್ನಾಗಿ ಆಚರಿಸುವಂತೆ ತಿಳಿಸಿರುವುದರಿಂದ ಪ್ರತಿ ವರ್ಷ ನ.14 ರಂದು ಪಂಡಿತ ಜವಹಾರ್ ಲಾಲ್ ನೆಹರು ರವರ ಜಯಂತಿಯನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಶಾಲೆಯ ವಿದ್ಯಾರ್ಥಿಗಳು ಪಂಡಿತ ಜವಹಾರ್ ಲಾಲ್ ನೆಹರು ರವರಂತೆ ವೇಷ ಹಾಕಿ ಕೊಂಡು ಗಮನ ಸೇಳೆದರು.

ಶಾಲೆಯ ವಿದ್ಯಾರ್ಥಿಗಳಿಂದ ಹಾಗೂ ಶಿಕ್ಷಕರಿಂದ ಮಕ್ಕಳ ದಿನಾಚರಣೆ ಅಂಗವಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಕಾರ್ಯಕ್ರಮದಲ್ಲಿ ಬಿ.ವಿ.ಆರ್ ಎಜ್ಯುಕೇಶನ್ ಟ್ರಸ್ಟ್ ಕಾರ್ಯದರ್ಶಿ ಗಳಾದ ಪದ್ಮಾವತಿ, ಪ್ರವೀಣ ,ಭಾಸ್ಕರ, ಮುಖ್ಯಗುರು ಸರ್ ಮತ್ ಖಾನ್ , ಶಾಲೆಯ ಶಿಕ್ಷಕರಾದ ಹಂಪಣ್ಣ, ಜ್ಯೋತಿ ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಪಾಲಕರು ಇದ್ದರು.

## ಮಸ್ಕಿಯಲ್ಲಿ ಕರ್ನಾಟಕ ಮಾದರ ಮಹಾಸಭಾ ಸದಸ್ಯತ್ವ ನೊಂದಣಿ ಅಭಿಯಾನ ಸಭೆ ಮಸ್ಕಿ ತಾಲೂಕು ಅಧ್ಯಕ್ಷರಾಗಿ ದುರ್ಗಾಪ್ರಸಾದ ತೋರಣದಿನ್ನಿ ಆಯ್ಕೆ

ಯುವ ಮಾರ್ಗ ಸುದ್ದಿ



**ಮಸ್ಕಿ,ನ.14–** ಕರ್ನಾಟಕ ಮಾದರ ಮಹಾಸಭಾದ ಮಸ್ಕಿ ತಾಲೂಕು ಅಧ್ಯಕ್ಷರಾಗಿ ದುರ್ಗಾಪ್ರಸಾದ ತೋರಣದಿನ್ನಿಯವರನ್ನು ಆಯ್ಕೆ ಮಾಡಲಾಯಿತು.ಮಸ್ಕಿ ಪಟ್ಟಣದ ಸರ್ಕ್ಯೂಟ್ ಹೌಸ್ ನಲ್ಲಿ ಶುಕ್ರವಾರ ಕರ್ನಾಟಕ ಮಾದರ ಮಹಾಸಭಾದ ಜಿಲ್ಲಾ ಉಸ್ತುವಾರಿ ಹೆಚ್. ಬಿ. ಮುರಾರಿ ನೇತೃತ್ವದಲ್ಲಿ ಸದಸ್ಯತ್ವ ನೊಂದಣಿ ಅಭಿಯಾನ ಸಭೆಯಲ್ಲಿ ಕರ್ನಾಟಕ ಮಾದರ ಮಹಾಸಭಾ ದ ಮಸ್ಕಿ ತಾಲೂಕು ಅಧ್ಯಕ್ಷರಾಗಿ ದುರ್ಗಾ ಪ್ರಸಾದ ತೋರಣದಿನ್ನಿ, ಉಪಾಧ್ಯಕ್ಷರಾಗಿ ಕಾಶಿಮಪ್ಪ.ಡಿ ಮುರಾರಿ, ಶಿವಪ್ಪ ತುಗ್ಗಲದಿನ್ನಿ ಕಾರ್ಯದರ್ಶಿಗಳಾಗಿ

ನಾಗಲಿಂಗ ತೀರ್ಥಭಾವಿ, ದುರ್ಗಪ್ಪ ಡಬ್ಬೇರ್ ಮಡು, ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಪರಶುರಾಮ, ಮೌನೇಶ, ಸೋಮನಾಥ, ವಿಜಯ,ಮರಿಸ್ವಾಮಿ, ದುರ್ಗರಾಜ ವಟಾಗ ಲ್,ದೇವರಾಜ, ಸುಮನಕುಮಾರ್,ಚಂದಪ್ಪ, ರಮೇಶ,ಮೌನೇಶ, ಕಾನೂನು ಸಲಹೆಗಾರರಾಗಿ ಮಲ್ಲಪ್ಪ ವಕೀಲರು ನಾಗರಬೆಂಚಿ ಇವರನ್ನು ಆಯ್ಕೆ ಮಾಡಲಾಯಿತು. ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ದೊಡ್ಡಪ್ಪ ಮುರಾರಿ, ಹನುಮಂತಪ್ಪ ಮುದ್ದಾಪುರ, ಮೌನೇಶ್ ಮುರಾರಿ, ಗೋಪಾಲಪ್ಪ ಪೂಜಾರಿ, ಹನುಮಂತಪ್ಪ ಪರಪೂರ, ಅಯ್ಯಪ್ಪ, ಹುಲುಗಪ್ಪ, ಮಲ್ಲಯ್ಯಮುರಾರಿ,ದುರುಗಪ್ಪ ಮುರಾರಿ, ಪೌಲರಾಜ್ ಸೇರಿದಂತೆ ಇತರರು ಇದ್ದರು.

# ಬ್ಯಾಗವಾಟ್ ಗ್ರಾಮ ಪಂಚಾಯತಿ ಪಿಡಿಓಗೆ ತಿಂಗಳ ಉತ್ತಮ ಅಭಿವೃದ್ದಿ ಅಧಿಕಾರಿ ಪ್ರಶಸ್ತಿ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.14–** ರಾಯಚೂರಿನ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ್ದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ತಾಲೂಕಿನ ಬ್ಯಾಗವಾಟ್ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳಾದ ಎನ್.ಶಿವಕುಮಾರ್ ಅವರಿಗೆ ಅಕ್ಟೋಬರ್ ತಿಂಗಳ ಉತ್ತಮ ಗ್ರಾಪಂ ಅಭಿವೃದ್ಧಿ ಅಧಿಕಾರಿ ಪ್ರಶಸ್ತಿಯನ್ನು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕಾಂದೂ ರವರು ಪ್ರಧಾನ ಮಾಡಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾದಡಿ ಮಾನವ ದಿನಗಳ ಸೃಜನೆ, ತೆರಿಗೆ ವಸೂಲಾತಿ, ಸ್ವಚ್ಛ ಭಾರತ್ ಮಿಷನ್ ನಡಿ ಶೌಚಾಲಯ ನಿರ್ಮಾಣ, ಸ್ವ ಸಹಾಯ ಒಕ್ಕೂಟಗಳಿಗೆ ಪ್ರೋತ್ಸಾಹ ಸೇರಿ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಪ್ರಗತಿ ಸಾಧಿಸಿದ್ದಕ್ಕೆ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು ಈ ವೇಳೆ ಜಿಪಂ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ, ಯೋಜನಾ ನಿರ್ದೇಶಕರಾದ ಶರಣಬಸವರಾಜ, ಮಾನ್ವಿ ತಾ,ಪಂ.ಇ.ಓ. ಪುರುರಾಜ್ ಸಿಂಗ್ ಸೋಲಂಕಿ ಐಎಎಸ್ ,ತಾ.ಪಂ.ಸಹಾಯಕ ನಿರ್ದೇಶಕರಾದ ಖಾಲೀದ್ ಅಹ್ಮದ್ ಸೇರಿದಂತೆ ತಾಲೂಕಿನ ಪಿ.ಡಿ.ಓ.ಗಳು. ಸಿಬ್ಬಂದಿಗಳು ಇದ್ದರು.

# ಖರಾಬದಿನ್ನಿ ಶಾಲೆಯಲ್ಲಿ ಪೋಷಕ : ಶಿಕ್ಷಕರ ಮಹಾಸಭೆ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.14–** ತಾಲೂಕಿನ ಖರಾಬದಿನ್ನಿ ಗ್ರಾಮದಲ್ಲಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ನಡೆದ ಪೋಷಕ – ಶಿಕ್ಷಕರ ಮಹಾಸಭೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಶಾಲೆಯ ಮುಖ್ಯ ಶಿಕ್ಷಕಿ ಮಾಧುರಿ ಮೂವ್ವಾ ಮಾತನಾಡಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ, ಸಂಸ್ಕೃತಿ,ಪರಂಪರೆಯನ್ನು ಬೆಳೆಸುವ ಕಾರ್ಯವನ್ನು ಮಾಡಬೇಕಾಗಿರುವುದರಿಂದ ಶಿಕ್ಷಣ ಇಲಾಖೆಯಿಂದ ಮಕ್ಕಳ ದಿನಾಚರಣೆ ಅಂಗವಾಗಿ ಪೋಷಕ – ಶಿಕ್ಷಕರ ಮಹಾಸಭೆ ಯನ್ನು ಹಮ್ಮಿಕೊಳ್ಳಲಾಗಿದೆ ಆಧುನಿಕ ಯುಗದಲ್ಲಿ ಮಕ್ಕಳಿಗೆ ತಂದೆ,ತಾಯಿ, ಗುರುಗಳು ಎಂಬ ಗೌರವವನ್ನು ಮೂಡಿಸುವ ಅಗತ್ಯವಿದೆ ಪ್ರಾಥಮಿಕ ಹಂತದಲ್ಲಿಯೇ ಮಕ್ಕಳಿಗೆ ಸಂಸ್ಕಾರ ಕಲಿಸಿದರೆ ದೇಶದಲ್ಲಿ ಅನಾಥಾಶ್ರಮ, ವೃದ್ಧಾಶ್ರಮಗಳು ಹುಟ್ಟುವುದಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳಿಂದ .ಸರಸ್ವತಿ ಪೂಜೆ ,ಪಾಲಕರ , ಪೋಷಕರ ಪಾದಪೂಜೆ ನಡೆಯಿತು.ಶಾಲೆ ಶಿಕ್ಷಿಕಿಯರಿಂದ ವಿದ್ಯಾರ್ಥಿಗಳ ತಾಯಂದಿರಿಗೆ ಉಡಿ ತುಂಬಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲಾ ಸುಧಾರಣ ಸಮಿತಿಯ ಅಧ್ಯಕ್ಷರಾದ ಲಿಂಗರಾಜ ಗೌಡ, ಉಪಾಧ್ಯಕ್ಷೇ ಗಂಗಮ್ಮ ಹಾಗೂ ಸದಸ್ಯರು ಶಾಲೆಯ ಶಿಕ್ಷಕರಾದ ಶ್ವೇತಾ, ಚನ್ನಬಸವ. ಟಿ, ಬಸವಂತ್ರಾಯ್ರ , ಮಲ್ಲಮ್ಮ, ಮಹಾಲಕ್ಷ್ಮಿ, ಶಂಕರಮ್ಮ, ಬಸವಲಿಂಗಮ್ಮಇದ್ದರು.

## ನವೆಂಬರ್ 15ರಂದು ಬೃಹತ್ ಆರೋಗ್ಯ ಶಿಬಿರ, ಕಾನೂನು ಸಾಕ್ಷರತಾ ಕಾರ್ಯಕ್ರಮ

**ರಾಯಚೂರು,ನ.14–** ದೇವದಾಸಿ ಪದ್ಧತಿ ನಿರ್ಮೂಲನೆ ವಿಷಯದ ಕುರಿತಂತೆ, ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ರಾಯಚೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ವಕೀಲರ ಸಂಘ, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಬೃಹತ್ ಆರೋಗ್ಯ ಶಿಬಿರ ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮವು ನವೆಂಬರ್ 15ರ ಬೆಳಿಗ್ಗೆ 9.30ಕ್ಕೆ ನಗರದ ಪಂಡಿತ ಶ್ರೀ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ನಡೆಯಲಿದೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಪೋಷಕರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರು ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ರಾಯಚೂರು ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಗೌರವಾನ್ವಿತ ಎಂ.ಜಿ. ಶುಕುರೆ ಕಮಲ್, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಗೌರವಾನ್ವಿತ ಶ್ರೀಮತಿ ನ್ಯಾಯಮೂರ್ತಿ ಅನು ಸಿವರಾಮನ್ ಅವರು ಉಪಸ್ಥಿತಿ ವಹಿಸುವರು.ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ರಾಯಚೂರಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾರುತಿ ಬಾಗಡೆ, ಕರ್ನಾಟಕ ಹೈಕೋರ್ಟ್ನ ರಿಜಿಸ್ಟಾರ್ ಜನರಲ್ ಕೆ.ಎಸ್. ಭರತ್ ಕುಮಾರ್, ಜಿಲ್ಲಾಧಿಕಾರಿ ನಿತೀಶ್ ಕೆ., ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹೆಚ್.ಶಶಿಧರ ಶೆಟ್ಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಶ್ರೇಣಿ ದಿವಾನಿ ನ್ಯಾಯಾಧೀಶರಾದ ಹೆಚ್.ಎ.ಸಾತ್ವಿಕ್, ವಕೀಲರ ಸಂಘದ ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನ್, ಅಪರ ಜಿಲ್ಲಾಧಿಕಾರಿ ಶಿವಾನಂದ, ಕೆಎಸ್ಎಲ್ಎಸ್ಎದ ಉಪ ಕಾರ್ಯದರ್ಶಿ ಶ್ರೀಧರ ಎಂ ಅವರು ಉಪಸ್ಥಿತರಿರುವರು.

ಗೋಷ್ಠಿಗಳು: ನವೆಂಬರ್ 15ರಂದು ಜಿಲ್ಲಾ ರಂಗಮಂದಿರದಲ್ಲಿ ನಡೆಯುವ ಬೃಹತ್ ಆರೋಗ್ಯ ಶಿಬಿರ ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಬೆಳಗ್ಗೆ 11.45 ರಿಂದ ನಾಲ್ಕು ಗೋಷ್ಠಿಗಳು ನಡೆಯಲಿವೆ. ಬೆಳಿಗ್ಗೆ 11.45 ರಿಂದ ಮಧ್ಯಾಹ್ನ 12.15ರವರೆಗೆ ನಡೆಯಲಿರುವ 1ನೇ ಗೋಷ್ಠಿಯಲ್ಲಿ 'ಕಾನೂನು ಜ್ಞಾನದ ಮಹತ್ವ' ವಿಷಯದ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಉಪನ್ಯಾಸ ನೀಡುವರು. ಮಧ್ಯಾಹ್ನ 12.16 ರಿಂದ ಮಧ್ಯಾಹ್ನ 12.45ರವರೆಗೆ ನಡೆಯಲಿರುವ ಎರಡನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರಿಗೆ ಸರ್ಕಾರದ ವಿವಿಧ ಸೌಲಭ್ಯಗಳು' ವಿಷಯದ ಮೇಲೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 12.46 ರಿಂದ ಮಧ್ಯಾಹ್ನ 01.15ರವರೆಗೆ ನಡೆಯಲಿರುವ ಮೂರನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರು ಮತ್ತು ಅವರ ಕುಟುಂಬದವರಿಗೆ ಸರ್ಕಾರದ ವಿವಿಧ ಯೋಜನೆಗಳು ಮತ್ತು ಅನುಕೂಲತೆಗಳು' ವಿಷಯದ ಮೇಲೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಅವರು ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 1.16 ರಿಂದ ಮಧ್ಯಾಹ್ನ 1.45ರವರೆಗೆ ನಡೆಯಲಿರುವ ನಾಲ್ಕನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರು ಮತ್ತು ಅವರ ಹೋರಾಟದ ಹಕ್ಕುಗಳು' ವಿಷಯದ ಮೇಲೆ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಮೋಕ್ಷಮ್ಮ ಅವರು ಉಪನ್ಯಾಸ ನೀಡಲಿದ್ದಾರೆ.

## ಆಸ್ತಿ ತೆರಿಗೆಯಿಂದ ವಿನಾಯತಿ ನೀಡಲಾದ ಸ್ವತ್ತುಗಳಿಗೆ ಸೇವಾ ಶುಲ್ಕ ವಸೂಲಾತಿ

**ರಾಯಚೂರು,ನ.14–** ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಆಸ್ತಿ ತೆರಿಗೆಯಿಂದ ವಿನಾಯತಿ ನೀಡಲಾದ ಸ್ವತ್ತುಗಳಿಗೆ ಶೇ.25 ರಷ್ಟು ಸೇವಾ ಶುಲ್ಕದ ವಸೂಲಾತಿಗೆ ಬೆಂಗಳೂರಿನ ಪೌರಾಡಳಿತ ನಿರ್ದೇಶನಾಲಯವು ಆ.ಸಂ: 29690 ಡಿಎಂಎ 72 ಡಿಇಬಿಟಿ 2019–20ರ ದಿ ಕರ್ನಾಟಕ ಮುನ್ಸಿಪಲ್ ಕಾರ್ಪೋರೇಶನ್ (ಅಮೆಂಡಮೆಂಟ್) ರೂಲ್ಸ್, 2003 ಕಾಲಂ.3, ಇನ್ಸರ್ಟೇಶನ್ ಆಫ್ ನ್ಯೂ ರೂಲ್ಸ್ 7–ಎ. ಆಫ್ಟರ್ ರೂಲ್ 7 ಆಫ್ ಶೆಡ್ಯೂಲ್ 3 (ಟ್ಯಾಕ್ಸೇಶನ್ ರೂಲ್ಸ್) ಟು ದಿ ಕರ್ನಾಟಕ ಮುನ್ಸಿಪಲ್ ಕಾರ್ಪೋರೇಶನ್ ಆಕ್ಟ್, 1976 ಸೆಕ್ಷನ್.110 (2)ರ ಪ್ರಕಾರ ತಿಳಿಸಿರುತ್ತದೆ.ಸರ್ಕಾರಿ ಅಥವಾ ಧಾರ್ಮಿಕ ಸಂಸ್ಥೆಗಳು, ಚಾರಿಟೇಬಲ್ (ದಾನಶೀಲ) ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಅಥವಾ ಆಸ್ಪತ್ರೆಗಳು, ಬೇರೆ ಯಾವುದೇ ತೆರಿಗೆ ವಿನಾಯತಿ ಪಡೆದ ಕಟ್ಟಡಗಳು, ಇನ್ನಿತರೆ ಕಟ್ಟಡಗಳಿಗೆ ಆಸ್ತಿ ತೆರಿಗೆಯಿಂದ ವಿನಾಯಿತಿಗೊಂಡು ಕಟ್ಟಡಗಳ ಮೇಲೆ ಸೇವಾ ಶುಲ್ಕವನ್ನು ವಿಧಿಸಲಾಗುತ್ತದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಜೆಸ್ಕಾಂ ವತಿಯಿಂದ ಗ್ರಾಹಕರ ಕುಂದು ಕೊರತೆ ಸಂವಾದ ಸಭೆ

**ರಾಯಚೂರು,ನ.14–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1 ಹಾಗೂ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಚೇರಿಯಲ್ಲಿ ನವೆಂಬರ್ 15ರ ಬೆಳಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಗ್ರಹಾಕರ ಕುಂದು ಕೊರತೆ ಸಂವಾದ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯುತ್ ಗ್ರಾಹಕರು ಹಾಜರಾಗಿ ವಿದ್ಯುತ್ ದೂರುಗಳ ಬಗ್ಗೆ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1 ಹಾಗೂ 2ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H